ಸಂಪುಟ : 9 ಸಂಚಿಕೆ 195 ಪುಟ : 4 ಬೆಲೆ: 3.00 ಬುಧವಾರ ಸೆಪ್ಟೆಂಬರ್ 11 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 195 Pages : 4 Price : 3.00 Wednesday september 11 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಅವರು ಸೆಪ್ಟೆಂಬರ್ 11 ರ ಪ್ರವಾಸ ಕಾರ್ಯಕ್ರಮ ಇಂತಿದೆ.

ಸೆಪ್ಟೆಂಬರ್ 11 ರಂದು ಬೆಳಿಗ್ಗೆ 11 ಗಂಟೆಗೆ ನಾಗಾವಿಯ ಗ್ರಾಮ ಗಂಗೋತ್ರಿ ವಿಶ್ವವಿದ್ಯಾಲಯ ಆವರಣದಲ್ಲಿ ಸ್ವಾಮಿ ವಿವೇಕಾನಂದರ ಪ್ರತಿಮೆ ಅನಾವರಣ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 3.30 ಗಂಟೆಗೆ ಕುರ್ತಕೋಟಿ ಗ್ರಾಮದಲ್ಲಿ ಜಾನುವಾರು ವಸತಿ ನಿಲಯ ಮುಕ್ತಿವನ, ತರಕಾರಿ ಮಾರುಕಟ್ಟೆ ಹಾಗೂ ಕರಕುಶಲ ಕೇಂದ್ರಗಳ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಸಂಜೆ 5.30 ಗಂಟೆಗೆ ಕುರ್ತಕೋಟಿ ರಸ್ತೆ ಮೂಲಕ ಹುಬ್ಬಳ್ಳಿಗೆ ಪ್ರಯಾಣಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸೆಪ್ಟೆಂಬರ್ 11 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ

ವಾರ್ಡ್ ನಂ. 21, 22 ಟವರ್ ಕಂಬ, ವಾಲ್ಮೀಕಿ ಭವನ, ಕಮತರ ಪ್ಲಾಟ್, ಕರುಗಲ್ ಲೇಔಟ್, ವಿಜಯನಗರ ಶಾಲೆ ಕೆಲವು ಭಾಗಗಳು. ವಾರ್ಡ್ ನಂ. 6 ನಾವಳ್ಳಿಯವರ ಲೈನ್, ರೆಡ್ಡಿಯವರ ಲೈನ್, ಅಂಬೇಡ್ಕರ್ ನಗರ, ಭಜಂತ್ರಿ ಓಣಿ, ಹುಲಿಯವರ ಲೈನ್, ಹಾದಿಮನಿಯವರ ಲೈನ್, ರೊಟ್ಟಿಯವರ ಲೈನ್, ಸಿದ್ದಲಿಂಗ ನಗರ, ಜಮಲಮ್ಮನ ಗುಡಿ ಲೈನ್.

ವಾರ್ಡ್ ನಂ. 21, 22, 23 ಕಗನಳ್ಳಿ, ಆರೋಗೇರಿ, ಹೆಬಸೂರು, ಹೊನ್ನೆತಮ್ಮ ಭಾಗ-1,2, ಸೋಮನಗೌಡ್ರ, ಕಮತರ ಲೈನ್, ವಿಭೂತಿ ಓಣಿ ಭಾಗ-1,2, ದ್ಯಾಮಪ್ಪನ ಕಟ್ಟಿ, ಪಡಗದ ಭಾಗ-1,2, ಗಂಜಿ ಬಸವೇಶ್ವರ ಸರ್ಕಲ್, ಕುಂಬಾರ ಓಣಿ, ಬನ್ನಿ ಕಾಳಮ್ಮನ ಗುಡಿ. ವಾರ್ಡ್ ನಂ. 27, 28 ಸಂಕಣ್ಣವರ ಲೇಔಟ್, ಕೇಶವ ನಗರ, ಚರ್ಚ್ ಲೈನ್, ಪಂಚಾಕ್ಷರಿ ನಗರ, 3ನೇ ಕ್ರಾಸ್. ವಾರ್ಡ್ ನಂ. 1 ಎಸ್ ಎಂ ಕೃಷ್ಣ ನಗರ ಪೂರ್ತಿ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತರ ಒಂದು ದಿನದ ಧರಣಿ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಸ್ಥಾಪಿಸಿರುವ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ನಾಗಾವಿ ಗ್ರಾಮದ ಬಗರ್ ಹುಕುಂ ಸಾಗುವಳಿ ರೈತರ ಜಮೀನಿನನ್ನು ವಶಪಡಿಸಿಕೊಂಡು ಅವರಿಗೆ ಪರಿಹಾರ ನೀಡದೆ ಬಿದಿಗೆ ತಳ್ಳಿದ್ದು, ಈ ಕುರಿತು ಅನೇಕ ಹೋರಾಟಗಳನ್ನು ಮಾಡಲಾಗಿದೆ. ಆದರೂ ನೊಂದ ರೈತರಿಗೆ ಪರಿಹಾರ ಸಿಗದೆ ರೈತರು ತಮ್ಮ ಜಮೀನನ್ನು ಕಳೆದುಕೊಂಡು ಪರಿಹಾರವೂ ಇಲ್ಲದೆ, ಇತ್ತ ಭೂಮಿಯೂ ಇಲ್ಲದೇ ಜೀವನ ಸಾಗಿಸಲು ಪರದಾಡುತ್ತಿದ್ದಾರೆ.

ಈ ಹಿಂದೆ ಜಿಲ್ಲಾಡಳಿತ ಕಛೇರಿ ಎದುರು ಹಮ್ಮಿಕೊಂಡಿದ್ದ 7 ದಿನದ ಅಹೋರಾತ್ರಿ ಹೋರಾಟಕ್ಕೆ ಜಿಲ್ಲಾಡಳಿತ ಮಣಿದು ರೈತರಿಗೆ ನ್ಯಾಯ ಒದಗಿಸುವ ಲಿಖಿತ ಭರವಸೆಯನ್ನು ನೀಡಿತ್ತಲ್ಲದೆ, ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲರು ಧರಣಿ ಸ್ಥಳಕ್ಕೆ ಭೇಟಿ ನೀಡಿ ಪರಿಹಾರದ ಭರವಸೆಯನ್ನು ನೀಡಿದ್ದರು. ಸಮಿತಿಗೆ ಎಲ್ಲಾ ದಾಖಲೆಗಳುನ್ನು ನೀಡಿದ್ದರೂ ಯಾವುದೇ ಪರಿಹಾರ ನೀಡದೆ ಇರುವುದು ಖೇದಕರ ಸಂಗತಿ.

ಸರ್ಕಾರ ರೈತ ವಿರೋಧಿ ಧೋರಣೆಯನ್ನು ಅನುಸರಿಸುತ್ತಿದ್ದು, ಬಡ ರೈತರಿಗೆ ಅನ್ಯಾಯವಾಗಿದೆ. ರೈತರ ಸಮಸ್ಯೆಗಳಿಗೆ ಪರಿಹಾರ ನೀಡಲು ಸರ್ಕಾರವನ್ನು ಒತ್ತಾಯಿಸಲು ಸೆ.11ರ ಮುಂಜಾನೆ 10 ಗಂಟೆಯಿಂದ ಗದಗನ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ನಾಗಾವಿಯಲ್ಲಿರುವ ಸಬರಮತಿ ಆಶ್ರಮದ ಎದುರು ಒಂದು ದಿನದ ಧರಣಿಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಉತ್ತರ ಕರ್ನಾಟಕ ಮಹಾಸಭಾ ರಾಜ್ಯಾಧ್ಯಕ್ಷ, ವಕೀಲರಾದ ರವಿಕಾಂತ ಅಂಗಡಿಯವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಹತ್ವದ ‘ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ’ । ಮಾನವ ಸರಪಳಿ ಕಾರ್ಯಕ್ರಮ ಯಶಸ್ವಿಗೊಳಿಸಲು ಡಿಸಿ ಸೂಚನೆ

# ‘ಮಾನವ ಸರಪಳಿ’ ಅರ್ಥಪೂರ್ಣವಾಗಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಇದೇ ಸೆಪ್ಟೆಂಬರ್ 15ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಮಾನವ ಸರಪಳಿ ನಿರ್ಮಿಸುವ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ, ಅಚ್ಚುಕಟ್ಟಾಗಿ ಹಮ್ಮಿಕೊಂಡು ಯಶಸ್ವಿಗೊಳಿಸುವಂತೆ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಕೆಸ್ವಾನ್ ಹಾಲ್‌ನಲ್ಲಿ ಮಂಗಳವಾರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಮಾನವ ಸರಪಳಿ ಕಾರ್ಯಕ್ರಮ ಹಮ್ಮಿಕೊಳ್ಳುವ ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸೆಪ್ಟೆಂಬರ್ 15ರ ಮುಂಜಾನೆ 9 ಗಂಟೆಗೆ ಹಾವೇರಿಯ ಬಾಳೆಹೊಸುರದಿಂದ ಕೊಪ್ಪಳದವರೆಗೆ ಏಕಕಾಲಕ್ಕೆ ಮಾನವ ಸರಪಳಿ ಕಾರ್ಯಕ್ರಮ ಜರಗಲಿದ್ದು, ಗದಗ ಜಿಲ್ಲೆಯ ಶಿರಹಟ್ಟಿ, ಲಕ್ಷ್ಮೇಶ್ವರ, ಮುಂಡರಗಿ ತಾಲೂಕಿನಲ್ಲಿ ಮಾನವ ಸರಪಳಿ ಹಾದು ಹೋಗಲಿದೆ. ಪ್ರತಿ ಕಿಲೋಮೀಟರ್‌ಗೆ ಒಬ್ಬರು ನೋಡಲ್ ಅಧಿಕಾರಿಯನ್ನು ನೇಮಿಸಿ, ಮುಖ್ಯ




ವೃತ್ತಗಳಲ್ಲಿ ತೋರಣ, ಬ್ಯಾನರ್ ಹಾಕಿಸಿ ಮಾನವ ಸರಪಳಿ ನಿರ್ಮಿಸಿ 100 ಮೀಟರ್ ವ್ಯಾಪ್ತಿಯಲ್ಲಿ ಜನರನ್ನು ಸೇರಿಸಿ ಸಂವಿಧಾನದ ಪೀಠಿಕೆ ಓದಿಸಿ, ರಾಷ್ಟ್ರಗೀತೆಯನ್ನು ಹಾಡಿಸಬೇಕು ಎಂದು ಸೂಚಿಸಿದರು.

ತಾಲೂಕಿನ ತಹಸೀಲ್ದಾರರು ಮತ್ತು ತಾ.ಪಂ ಕಾರ್ಯನಿರ್ವಾಹಕರನ್ನು ಒಳಗೊಂಡು ಸಂಪೂರ್ಣ ಯೋಜನೆ ಜೊತೆಗೆ ಸೂಕ್ಷ್ಮ ಯೋಜನೆ ತಯಾರಿಸಿ ಮಾನವ ಸರಪಳಿ ಹಾದುಹೋಗುವ ಗ್ರಾಮ ಸೇರಿದಂತೆ, 10 ಕಿ.ಮೀ ವ್ಯಾಪ್ತಿಯಲ್ಲಿರುವ ಗ್ರಾಮಗಳಲ್ಲಿ ಗ್ರಾಮ ಸಭೆಯನ್ನು, ಗ್ರಾಮದ ಶಾಲೆಗಳಲ್ಲಿ ಸಭೆಯನ್ನು ನಡೆಸಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು, ಗ್ರಾಮಸ್ಥರು, ಅಧಿಕಾರಿ-ಸಿಬ್ಬಂದಿಗಳು ಈ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಆಯಾ ಗ್ರಾಮಗಳ ವ್ಯಾಪ್ತಿಯಲ್ಲಿ ಬರುವ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ತಹಸೀಲ್ದಾರರು, ಪಿಡಿಓ, ನರೇಗಾ, ಗ್ರಾಮ ಪಂಚಾಯತ್ ಅಧಿಕಾರಿ- ಸಿಬ್ಬಂದಿಗಳು ಅವಶ್ಯಕ ಪೂರ್ವಸಿದ್ಧತಾ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ತಾಲೂಕಿನ ಮುಖ್ಯ ರಸ್ತೆಯಲ್ಲಿ ಮಾನವ ಸರಪಳಿ ಹಾದು ಹೋಗುವಾಗ ವಾಹನ ದಟ್ಟಣೆ ಬಗ್ಗೆ ಗಮನಹರಿಸಿ ವಿದ್ಯಾರ್ಥಿಗಳ ಸುರಕ್ಷತೆಯೆಡೆ ಗಮನ ವಹಿಸಿ ವಾಹನ ಸವಾರರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ನಿರ್ವಹಿಸಬೇಕು. ಸಮಾಜ ಕಲ್ಯಾಣ ಇಲಾಖೆ, ಪೊಲೀಸ್ ಇಲಾಖೆ ಸೇರಿದಂತೆ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಯಾವುದೇ ಲೋಪವಾಗದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ಮಾತನಾಡಿ, ಪೊಲೀಸ್ ಇಲಾಖೆಯ ಪಿಎಸ್‌ಐ, ಡಿವಾಯ್‌ಎಸ್‌ಪಿ ಮತ್ತು ಸಂಚಾರಿ ಪೊಲೀಸ್ ಅಧಿಕಾರಿಗಳ ಸಹಕಾ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ಮಾತನಾಡಿ, ಪೊಲೀಸ್ ಇಲಾಖೆಯ ಪಿಎಸ್‌ಐ, ಡಿವಾಯ್‌ಎಸ್‌ಪಿ ಮತ್ತು ಸಂಚಾರಿ ಪೊಲೀಸ್ ಅಧಿಕಾರಿಗಳ ಸಹಕಾರದೊಂದಿಗೆ ಮಾನವ ಸರಪಳಿಗೆ ಸಂಪೂರ್ಣ ಬಂದೋಬಸ್ತ್ ಒದಗಿಸಲಾಗುವುದು ಎಂದು ಹೇಳಿದರು.

ರದೊಂದಿಗೆ ಮಾನವ ಸರಪಳಿಗೆ ಸಂಪೂರ್ಣ ಬಂದೋಬಸ್ತ್ ಒದಗಿಸಲಾಗುವುದು ಎಂದು ಹೇಳಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಗ್ರಾಮ ಮತ್ತು ತಾಲೂಕುಗಳಲ್ಲಿರುವ ವಿವಿಧ ಸಂಘಟನೆಗಳ ಮತ್ತು ಸ್ವ-ಸಹಾಯ ಗುಂಪುಗಳ ಜೊತೆ ಸಭೆ ನಡೆಸಿ ಹೆಚ್ಚಿನ ಸಂಖ್ಯೆಯಲ್ಲಿ ಸಂಘದ ಸದಸ್ಯರು, ಪದಾಧಿಕಾರಿಗಳು, ಮತ್ತು ಸಾರ್ವಜನಿಕರನ್ನು ಸೇರಿಸಬೇಕು. ಮಾನವ ಸರಪಳಿಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳ ಸುರಕ್ಷತೆಯ ಬಗ್ಗೆ ಗಮನ ನೀಡಿ, ಮಕ್ಕಳನ್ನು ಕರೆತರುವ ಮತ್ತು ಕಳಿಸುವ ವ್ಯವಸ್ಥೆ ಸರಿಯಾಗಿ ಆಗಬೇಕು ಎಂದು ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಮಾತನಾಡಿ, ಮಾನವ ಸರಪಳಿಯ ಕಾರ್ಯಕ್ರಮದ ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಎಲ್ಲಾ ಅಧಿಕಾರಿಗಳು, ಸಿಬ್ಬಂದಿ, ಮತ್ತು ಶಾಲಾ-ಕಾಲೇಜು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ನೊಂದಣಿ ಮಾಡಿಕೊಳ್ಳುವಂತೆ ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದುಕಮ್ಮನವರ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಿ.ಎಲ್. ಬಾರಟಕ್ಕಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ, ವಿವಿಧ ತಾಲೂಕಿನ ತಹಸೀಲ್ದಾರರು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಜಿಲ್ಲಾ ಮಟ್ಟದ ಇಲಾಖೆ ಅಧಿಕಾರಿಗಳು ಹಾಜರಿದ್ದರು.

### ಹೈಕೋರ್ಟ್‌ನಲ್ಲಿ ನಗರಸಭೆ ಅಧ್ಯಕ್ಷ-ಉಪಾಧ್ಯಕ್ಷರ ಮೀಸಲಾತಿ ವಿಚಾರಣೆ ಇಂದು

# ಗರಿಗೆದರಿದ ರಾಜಕೀಯ ಚರ್ಚೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆಯ 2ನೇ ಅವಧಿಯ ಅಧ್ಯಕ್ಷ, ಉಪಾಧ್ಯಕ್ಷರ ಮೀಸಲಾತಿಗೆ ತಡೆಯಾಜ್ಞೆ ನೀಡಿದ್ದ ಹೈಕೋರ್ಟ್, ಸೆ.11ರಂದು ಪ್ರಕರಣವನ್ನು ಮತ್ತೊಮ್ಮೆ ಕೈಗೆತ್ತಿಕೊಳ್ಳಲಿದೆ.

ಸದ್ಯ ನಗರಸಭೆ ಅಧ್ಯಕ್ಷ ಸ್ಥಾನ ಸಾಮಾನ್ಯ ಮತ್ತು ಉಪಾಧ್ಯಕ್ಷ ಸ್ಥಾನ ಸಾಮಾನ್ಯ ಮಹಿಳೆಗೆ ಮೀಸಲಾಗಿತ್ತು. ಆದರೆ ಮೀಸಲಾತಿ ಘೋಷಣೆಯಲ್ಲಿ ರೋಸ್ಟರ್ ಪಾಲನೆಯಾಗಿಲ್ಲ ಎಂದು ಆರೋಪಿಸಿ 1ನೆ ವಾರ್ಡಿನ ಕಾಂಗ್ರೆಸ್ ಸದಸ್ಯೆ ಲಕ್ಷ್ಮೀ ಅನಿಲಕುಮಾರ ಸಿದ್ದಮ್ಮನಹಳ್ಳಿ ಹಾಗೂ 10ನೇ ವಾರ್ಡಿನ ಕಾಂಗ್ರೆಸ್ ಸದಸ್ಯ ಇಮ್ತಿಯಾಜ್ ಶಿರಹಟ್ಟಿ, 2024 ಆಗಸ್ಟ್ 31ರಂದು ಧಾರವಾಡ ಹೈಕೋರ್ಟ್ ಮೆಟ್ಟಿಲೇರಿದ್ದರು.

ಅರ್ಜಿದಾರರ ಮನವಿ ಪುರಸ್ಕರಿಸಿದ ಹೈಕೋರ್ಟ್, ಮುಂದಿನ ವಿಚಾರಣೆಯವರೆಗೂ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಗೆ ತಡೆಯಾಜ್ಞೆ ಹೊರಡಿಸಿತ್ತು. ಸೆ.11ರಂದು ಮೀಸಲಾತಿ ವಿಷಯ ಹೈಕೋರ್ಟ್‌ನಲ್ಲಿ ಮತ್ತೊಮ್ಮೆ ವಿಚಾರಣೆಗೆ ಬರಲಿದ್ದು, ಅವಳಿ ನಗರದಲ್ಲಿ ರಾಜಕೀಯ ಚರ್ಚೆ ಗರಿಗೆದರಿದೆ.




ಗದಗ-ಬೆಟಗೇರಿ ನಗರಸಭೆಯಲ್ಲಿ ಬಿಜೆಪಿ ಸ್ಪಷ್ಟ ಬಹುಮತ ಹೊಂದಿದ್ದು, ಮೊದಲ ಅವಧಿಯನ್ನು ಯಶಸ್ವಿಯಾಗಿ ಪೂರೈಸಿದೆ. 2ನೇ ಅವಧಿಯಲ್ಲಿ ಬಿಜೆಪಿಗೆ ಅಧಿಕಾರ ಸಿಗಬಾರದು ಎನ್ನುವ ದುರುದ್ದೇಶದಿಂದ ಕಾಂಗ್ರೆಸ್ ನಾಯಕರು ವಿ.ಪ ಸದಸ್ಯ ಸಲೀಂ ಅಹ್ಮದ್ ಅವರನ್ನು ಗದಗ ಮತದಾರರ ಪಟ್ಟಿಗೆ ಸೇರ್ಪಡೆ ಮಾಡುವ ಹುನ್ನಾರ ನಡೆಸಿದ್ದರು.

ಈ ಯೋಜನೆಯಲ್ಲಿ ಕಾಂಗ್ರೆಸ್ ಸದಸ್ಯರು ಸೋಲು ಕಾಣುತ್ತಲೇ ಹತಾಶರಾಗಿ ಮೀಸಲಾತಿಯನ್ನು ಹೈಕೋರ್ಟ್‌ನಲ್ಲಿ ಪ್ರಶ್ನಿಸಿದ್ದಾರೆ. ಬಿಜೆಪಿಯನ್ನು ಅಧಿಕಾರದಿಂದ ದೂರ ಇಡಬೇಕು, ಬಿಜೆಪಿಗೆ ಸರಳವಾಗಿ ಅಧಿಕಾರ ಸಿಗಬಾರದು ಎನ್ನುವ ಕಾರಣಕ್ಕೆ ಕಾಂಗ್ರೆಸ್ ಸದಸ್ಯರು ಕೋರ್ಟ್ ಮೊರೆ ಹೋಗಿದ್ದಾರೆ ಎನ್ನಲಾಗಿದೆ.

ನಗರಸಭೆ ಅಧ್ಯಕ್ಷ-ಉಪಾಧ್ಯಕ್ಷರ

ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ ಹಾಗೂ ಎಸ್.ವಿ. ಸಂಕನೂರ ಅವರು ಗದಗ-ಬೆಟಗೇರಿ ಮತದಾರರ ಪಟ್ಟಿ ಸೇರ್ಪಡೆಗೆ ಅರ್ಜಿ ಸಲ್ಲಿಸಿದ್ದರು. ಆ ಮೂಲಕ ನಗರಭೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಯಲ್ಲಿ ಮತದಾನ ಮಾಡುವ ವಿಚಾರ ಹೊಂದಿದ್ದರು. ಈ ಬಗ್ಗೆ ವಿಚಾರಣೆ ನಡೆಸಿದ ಉಪವಿಭಾಗಾಧಿಕಾರಿಗಳು, ಕಲಬುರ್ಗಿ ಹೈಕೋರ್ಟ್ ಪೀಠ ಇದೇ ರೀತಿಯ ಪ್ರಕರಣದಲ್ಲಿ ನೀಡಿದ ತೀರ್ಪನ್ನು ಉಲ್ಲೇಖಿಸಿ, ಅರ್ಜಿಯನ್ನು ತಿರಸ್ಕರಿಸಿದ್ದರು.

ಮೀಸಲಾತಿ ಪ್ರಕಟಗೊಂಡ ನಂತರ ಆಕ್ಷೇಪಣೆಗೆ ಕಾಲಾವಕಾಶವಿತ್ತು. ಆದರೆ ಕಾಂಗ್ರೆಸ್ ಸದಸ್ಯರು, ಸರಕಾರ ನೀಡಿದ್ದ ಕಾಲಾವಕಾಶದ ಅವಧಿ ಮೀರಿದ ನಂತರ ಕೋರ್ಟ್ ಮೊರೆ ಹೋಗಿದ್ದಾರೆ. ಹೀಗಾಗಿ ಹೈಕೋರ್ಟ್ ಈ ಹಿಂದಿನ ಮೀಸಲಾತಿಯನ್ನೇ ಪುರಸ್ಕರಿಸುವ ವಿಶ್ವಾಸವಿದೆ ಎನ್ನುತ್ತಾರೆ ನಗರಸಭೆಯ ಮಾಜಿ ಅಧ್ಯಕ್ಷೆ ಉಷಾ ದಾಸರ.

### ದೇವಸ್ಥಾನಗಳನ್ನೇ ಗುರಿಯಾಗಿಸಿ ದರೋಡೆ ಮಾಡುತ್ತಿದ್ದ ತಂಡ ಜೈಲಿಗೆ

# ಗದಗ ಪೊಲೀಸ್ ಕಾರ್ಯಾಚರಣೆಗೆ ಬಹುಪರಾಕ್

■ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಷೇಶ್ವರ ಹಾಗೂ ಶಿರಹಟ್ಟಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ದೇವಸ್ಥಾನ ಕಳ್ಳತನ ಹಾಗೂ ಮಹಿಳೆಯರ ಕೊರಳಲ್ಲಿರುವ ಆಭರಣ ಕಳ್ಳತನ ಪ್ರಕರಣಗಳು ದಾಖಲಾಗಿದ್ದವು. ಸದರಿ ಪ್ರಕರಣಗಳ ತನಿಖೆಯಲ್ಲಿ ಖಚಿತ ಮಾಹಿತಿ ಆಧಾರದ ಮೇಲೆ ಲಕ್ಷೇಶ್ವರ ಶಹರದ ಹೊರವಲಯದಲ್ಲಿ ಆರೋಪಿತ ರಾದ ರಾಣೇಬೆನ್ನೂರಿನ ಪ್ರಸಾದ & ಗುರುಪ್ರಸಾದ ನಾಗರಾಜಪ್ಪ (28), ಪ್ರದೀಪ್ ನಾಗರಾಜಪ್ಪ (24), ಗಂಗಾಪೂರದ ಶ್ರೀಕಾಂತ ಮಾಲತೇಶ ಗುಡಗೂರ (29) ಇವರನ್ನು ಬಂಧಿಸಿದ್ದಾರೆ.

ಆರೋಪಿತರು ಶಿರಹಟ್ಟಿಯ ಅಂಬಾಭವಾನಿ ದೇವಸ್ಥಾನ, ಬನ್ನಿಕೊಪ್ಪ ಗ್ರಾಮದ ಹೇಮಗಿರಿ ಮಠ, ಶಿರಹಟ್ಟಿಯ ವಡವಿ ಗ್ರಾಮದ ದುರ್ಗಾದೇವಿ ಹಾಗೂ ಮಾರುತಿ ದೇವಸ್ಥಾನ, ಹಾವೇರಿಯ ಹೇಮಗಿರಿ ಚನ್ನಬಸವೇಶ್ವರ ಮಠ, ರಾಣೇಬೆನ್ನೂರ ಬನಶಂಕರಿ ದೇವಿ ದೇವಸ್ಥಾನ, ನೀರಲಗಿಯ ಗ್ರಾಮದೇವತೆ ದೇವಸ್ಥಾನ, ತುಮ್ಮಿನಕಟ್ಟೆ ಗ್ರಾಮದ ಬನಶಂಕರಿ ದೇವಿ ದೇವಸ್ಥಾನ, ಹೊಸದುರ್ಗಾದ ಹಾಲು ರಾಮೇಶ್ವರ ಗಂಗಮ್ಮ ದೇವಸ್ಥಾನಗಳ ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿರುವುದು ತಿಳಿದು ಬಂದಿದೆ.



ಇದಲ್ಲದೆ, ಲಕ್ಷ್ಮೇಶ್ವರದ ಶಹರದಲ್ಲಿ, ತಾಲೂಕಿನ ಶಿಗ್ಲಿ ಗ್ರಾಮದಲ್ಲಿ, ಗದಗ ಶಹರದಲ್ಲಿ, ವಿಜಯನಗರ ಜಿಲ್ಲೆಯ ಕೊಟ್ಟೂರ ಶಹರದಲ್ಲಿ, ವಿಜಯನಗರ ಜಿಲ್ಲೆಯ ಹರಪ್ಪನಹಳ್ಳಿ ಶಹರದಲ್ಲಿ, ಶಿವಮೊಗ್ಗ ಜಿಲ್ಲೆಯ ಆನವಟ್ಟಿ ಶಹರದಲ್ಲಿ, ಚಿತ್ರದುರ್ಗ ಜಿಲ್ಲೆಯ ಹೊಸದುರ್ಗಾ ಶಹರದಲ್ಲಿ ಸರಗಳ್ಳತನ ಪ್ರಕರಣಗಳಲ್ಲಿಯೂ ಭಾಗಿಯಾಗಿರುವ ಬಗ್ಗೆ ವಿವರಗಳು ಲಭ್ಯವಾಗಿವೆ.

ಸದರಿ ಆರೋಪಿತರು ಒಟ್ಟು 8 ದೇವಸ್ಥಾನಗಳನ್ನು ಹಾಗೂ 7 ಸರಗಳ್ಳತನ ಮಾಡಿದ್ದು ಈ ಬಗ್ಗೆ ಶಿರಹಟ್ಟಿ, ಲಕ್ಷ್ಮೇಶ್ವರ, ಗದಗ ಶಹರ, ಗುತ್ತಲ, ಹಲಗೇರಿ, ಕೊಟ್ಟೂರ, ಹರಪ್ಪನಹಳ್ಳಿ, ಆನವಟ್ಟಿ, ಹೊಸದುರ್ಗಾ ಪೊಲೀಸ್ ಠಾಣೆಗಳಲ್ಲಿ ಕೃತ್ಯ ಎಸಗಿದ ಬಗ್ಗೆ ಒಪ್ಪಿಕೊಂಡಿದ್ದಾರೆ.

ಬಂಧಿತ ಆರೋಪಿತರಿಂದ ಒಟ್ಟು 56,22,000 ರೂ ಕಿಮ್ಮತ್ತಿನ 1,328 ಗ್ರಾಂ (32 ತೊಲೆ 8 ಗ್ರಾಂ) ಬಂಗಾರದ ಆಭರಣಗಳನ್ನು ಹಾಗೂ ಒಟ್ಟು 15,96,000 ರೂ. ಕಿಮ್ಮತ್ತಿನ 19,100 ಗ್ರಾಂ (19. ಕೆ.ಜಿ. 100 ಗ್ರಾಂ) ಬೆಳ್ಳಿಯ ಆಭರಣಗಳಗಳನ್ನು ಮತ್ತು ಒಟ್ಟು 12 ಸಾವಿರ ರೂ ನಗದು ಹಣವನ್ನು ಹಾಗೂ ಒಂದು 220 ಸಿಸಿ ಪಲ್ಸರ್ ಬೈಕ್ ವಶಪಡಿಸಿಕೊಳ್ಳಲಾಗಿದೆ.

ಅಲ್ಲದೇ 1 ಹಾಗೂ 2ನೇ ಆರೋಪಿತರ ಅಣ್ಣ ರಾಮು @ ರಮೇಶ ನಾಗರಾಜಪ್ಪ ಇವನನ್ನು ರಾಣಿಬೆನ್ನೂರು ಗ್ರಾಮಾಂತರ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ 1 ಮತ್ತು 3ನೇ ಆರೋಪಿತರು ಸೇರಿಕೊಂಡು ಕೊಲೆ ಮಾಡಿ ಮುಚ್ಚಿ ಹಾಕಿದ ಬಗ್ಗೆ ಪತ್ತೆ ಮಾಡಿದ್ದು, ಆ ಕುರಿತು ರಾಣಿಬೆನ್ನೂರು ಗ್ರಾಮಾಂತರ ಪೊಲೀಸ್ ಠಾಣೆಯ ಗುನ್ನಾ ನಂಬರ್ 238/2024 ಕಲಂ: 302, 201 ಐಪಿಸಿ ಅಡಿಯಲ್ಲಿ ಪ್ರಕರಣ ದಾಖಲಾಗಿ ತನಿಖೆಯಲ್ಲಿದೆ.

ಸದರಿ ಆರೋಪಿತರನ್ನು ಬಂಧಿಸಿ ಪತ್ತೆ ಹಚ್ಚುವಲ್ಲಿ ಹೆಚ್ಚುವರಿ ಎಸ್ಪಿ ಎಮ್.ಬಿ. ಸಂಕದ, ಡಿವೈಎಸ್ಪಿ ಜೆ.ಎಚ್. ಇನಾಮದಾರ ಅವರ ಮಾರ್ಗದರ್ಶನದಲ್ಲಿ ಶಿರಹಟ್ಟಿ ಸಿಪಿಐ ನಾಗರಾಜ್ ಮಾಡಳ್ಳಿ, ಪಿಎಸ್‌ಐ ಈರಪ್ಪ ರಿತ್ತಿ, ಮಾರುತಿ ಜೋಗದಂಡಕರ್ ಹಾಗೂ ಸಿಬ್ಬಂದಿ ಈ ಕಾರ್ಯಾಚರಣೆ ನಡೆಸಿದ್ದರು. ಅಧಿಕಾರಿ ಹಾಗೂ ಸಿಬ್ಬಂದಿಯವರ ಕಾರ್ಯಾಚರಣೆಗೆ ಬೆಳಗಾವಿ ಉತ್ತರ ವಲಯದ ಪೊಲೀಸ್ ಮಹಾನಿರೀಕ್ಷಕರು, ಗದಗ ಪೊಲೀಸ್ ಅಧೀಕ್ಷಕರು ಮೆಚ್ಚುಗೆ ವ್ಯಕ್ತಪಡಿಸಿ, ನಗದು ಬಹುಮಾನ ಘೋಷಿಸಿದ್ದಾರೆ.

## 'ಅಮರಶಿಲ್ಪಿ ಜಕಣಾಚಾರಿ ವೃತ್ತ' ನಾಮಕರಣಕ್ಕೆ ಮನವಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಹಿರೇಬಣದ ಕೋರ್ಟ್ ಹತ್ತಿರವಿರುವ ವೃತ್ತಕ್ಕೆ 'ಅಮರಶಿಲ್ಪಿ ಜಕಣಾಚಾರಿ ವೃತ್ತ' ಎಂದು ನಾಮಕರಣ ಮಾಡುವಂತೆ ಆಗ್ರಹಿಸಿ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾದ ಲಕ್ಷ್ಮೇಶ್ವರ ತಾಲೂಕಾ ಘಟಕದವರು ಮಂಗಳವಾರ ಪುರಸಭೆ ಅಧ್ಯಕ್ಷರಿಗೆ ಹಾಗೂ ಮುಖ್ಯಾಧಿಕಾರಿಗಳಿಗೆ ಮನವಿ ಅರ್ಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಮಾಜದ ಮುಖಂಡರು, ಅಮರಶಿಲ್ಪಿ ಜಕಣಾಚಾರಿ ಕೇವಲ ಒಂದು ಊರು, ಜಿಲ್ಲೆ, ರಾಜ್ಯ ಎನ್ನದೇ ಇಡೀ ಪ್ರಪಂಚಕ್ಕೆ ಕೊಡುಗೆ ನೀಡಿದ್ದಾರೆ. ಅದರಲ್ಲಿ ನಮ್ಮ ಗದಗ ಜಿಲ್ಲೆಗೆ ಅವರ ಕೊಡುಗೆಗಳು ಸಾಕಷ್ಟಿದ್ದು, ಜಿಲ್ಲೆಯ ಲಕ್ಕುಂಡಿ, ಸೂಡಿ ಮತ್ತು ಯಳವತ್ತಿ ಗ್ರಾಮಗಳಲ್ಲಿ ಜಕಣಾಚಾರಿಯವರ ಕಲಾಕೃತಿಗಳು ವಿಜೃಂಭಿಸುತ್ತಿವೆ. ಪಟ್ಟಣದ ಶ್ರೀ ಸೋಮನಾಥ, ಕಾಳಿಕಾದೇವಿ ಹಾಗೂ ಮೌನೇಶ್ವರ, ಲಕ್ಷ್ಮೀಲಿಂಗ, ಶಂಖ ಬಸದಿ, ಆನಂತನಾಥ ಬಸದಿ, ಸಹಸ್ರ ಲಿಂಗ ದೇವಸ್ಥಾನ, ಅಗಸ್ತ್ಯ ತೀರ್ಥ ಸೇರಿದಂತೆ ಇನ್ನೂ ಅನೇಕ ದೇವಾಲಯಗಳು, ಹಾಗೂ ಕಲ್ಯಾಣಿಗಳಿವೆ. ಪಟ್ಟಣದಲ್ಲಿ ಜಕಣಾಚಾರಿಯವರ ಕಲೆಯನ್ನು ಕಾಣಬಹುದಾಗಿದೆ ಎಂದರು.

ಈ ನಿಟ್ಟಿನಲ್ಲಿ ಪಟ್ಟಣದ ಕೋರ್ಟ್ ಹತ್ತಿರವಿರುವ ವೃತ್ತಕ್ಕೆ ಅಮರಶಿಲ್ಪಿ ಜಕಣಾಚಾರಿ ವೃತ್ತ ಎಂದು ನಾಮಕರಣ ಮಾಡುವ ಮೂಲಕ ಮಹಾನ್ ಶಿಲ್ಪಿಯನ್ನು ಗೌರವಿಸುವ ಕಾರ್ಯ ಮಾಡಬೇಕೆಂದು ಸಮಾಜದ ಪರವಾಗಿ ಮನವಿ ಸಲ್ಲಿಸುತ್ತಿರುವುದಾಗಿ ವಿನಂತಿಸಿದರು.

ಮನವಿ ಸ್ವೀಕರಿಸಿದ ಅಧ್ಯಕ್ಷೆ ಯಲ್ಲಮ್ಮ ದುರ್ಗಣ್ಣವರ, ಉಪಾಧ್ಯಕ್ಷ ಪೀರದೋಷ ಆಡೂರ ಹಾಗೂ ಮುಖ್ಯಾಧಿಕಾರಿ ಮಹೇಶ ಹಡಪದ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದು ಪರಿಶೀಲಿಸುವುದಾಗಿ ತಿಳಿಸಿದರು.

ಸಮಾಜದ ಈರಪ್ಪ ಬಡಿಗೇರ, ರಾಮಚಂದ್ರ ಬಡಿಗೇರ, ಭಾಸ್ಕರ್ ಸೊರಟೂರ, ರಾಘವೇಂದ್ರ ಬಡಿಗೇರ, ಮೋಹನ ಸುತಾರ, ಶಿವಾನಂದ ಬಡಿಗೇರ, ರವಿ ಸುತಾರ, ಜಿ.ಎಸ್. ಬಾಲೇಹೊಸೂರ, ಅಶೋಕ ಸೊರಟೂರ, ದೇವಿಂದ್ರಪ್ಪ ಬಡಿಗೇರ, ಸಿ.ಜಿ. ಸಿಂಗಟಾಲೂರ, ಮೌನೇಶ ಇಟಗಿ, ಮೌನೇಶ ಬಾಲೇಹೊಸೂರು, ಎಸ್.ಡಿ. ಪತ್ತಾರ, ಗಣೇಶ, ನಾರಾಯಣ, ಮಾನಪ್ಪ ದುದ್ದಗಿ, ನಾಗರಾಜ ಪತ್ತಾರ, ಜಿ.ಕೆ. ಸೊರಟೂರ, ಪ್ರೇಮಕ್ಕ ಬಡಿಗೇರ, ಶಶಿಕಲಾ ಬಡಿಗೇರ, ಸರಸ್ವತಿ ಬಾಲೇಹೊಸೂರ, ಪಿ.ಬಿ. ಸೊರಟೂರ, ವಿ.ಸಿ. ಸಿಂಗಟಾಲೂರ, ರತ್ನವ್ವ ಮುಂತಾದವರಿದ್ದರು.

### ಪ್ರವಚನ ಶತಮಾನೋತ್ಸವ ಮಂಗಲ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

## ಕಷ್ಟದಲ್ಲಿ ಜೊತೆಗಿದ್ದವರನ್ನು ಮರೆಯಬಾರದು

■ ವಿಜಯಸಾಕ್ಷಿ ಸುದ್ದಿ, ರಾಯಚೂರು

ಸುಖ–ದುಃಖಗಳು ಶಾಶ್ವತವಲ್ಲ. ಸುಖದ ನಂತರ ದುಃಖ, ದುಃಖದ ನಂತರ ಸುಖ ಇದ್ದೇ ಇರುತ್ತದೆ. ಆದರೆ ಕಷ್ಟದಲ್ಲಿ ಜೊತೆಗಿದ್ದವರನ್ನು ಸುಖ ಬಂದಾಗ ಎಂದಿಗೂ ಮರೆಯಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ನಗರದ ಸಾವಿರದೇವರ ಸಂಸ್ಥಾನ ಕಿಲ್ಲೇ ಬೃಹನ್ಮಠದಲ್ಲಿ ಜರುಗಿದ ಶ್ರಾವಣ ಪುರಾಣ ಪ್ರವಚನ ಶತಮಾನೋತ್ಸವ ಮಂಗಲ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮೌನ ಮನಸ್ಸನ್ನು ಶುದ್ಧಿ ಮಾಡುತ್ತದೆ. ಸ್ನಾನ ದೇಹ ಶುದ್ಧಿ ಮಾಡುತ್ತದೆ. ಧ್ಯಾನ ಮತ್ತು ಸತ್ಸಂಗ ಶುದ್ಧಿಯನ್ನು ಶುದ್ಧ ಮಾಡುತ್ತದೆ. ಉಪವಾಸ ಆರೋಗ್ಯವನ್ನು ಶುದ್ಧ ಮಾಡುತ್ತದೆ. ಬಳಸಿಕೊಂಡವರನ್ನು ಮರೆತರೂ ಬೆಳೆಸಿದವರನ್ನು ಮರೆಯಬಾರದು. ದುಡಿಯುವ ಕೈಗೆ ಬಡತನವಿಲ್ಲ. ಆಲಸ್ಯದ ಬದುಕಿಗೆ ನೆಮ್ಮದಿ ಇಲ್ಲ. ಕರ್ತವ್ಯದ ಕಾಲು ದಾರಿಯಲ್ಲಿ ನಡೆಯುವವರಿಗೆ ಯಶಸ್ಸು ನಿಶ್ಚಿತ. ಧಾರ್ಮಿಕ ಮೌಲ್ಯಗಳ ಸಂರಕ್ಷಣೆ ನಮ್ಮೆಲ್ಲರ ಗುರಿಯಾಗಬೇಕು.

ಸತ್ಯ, ಧರ್ಮ, ನ್ಯಾಯ, ನೀತಿ ದೇವರ ಉಳಿತಾಯ ಖಾತೆಗೆ ಜಮಾ ಮಾಡಿದಂತೆ. ಕಷ್ಟ ಕಾಲದಲ್ಲಿ ಸಹಾಯಕ್ಕೆ ಬರುತ್ತದೆ. ವೀರಶೈವ ಧರ್ಮದಲ್ಲಿ ಸುಖ–ದುಃಖಗಳನ್ನು ಸಮಾನವಾಗಿ ಕಂಡಿದ್ದಾರೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ತತ್ವ ಸಿದ್ಧಾಂತಗಳನ್ನು ಪ್ರಸಾರ ಪಡಿಸಿದ ಕೀರ್ತಿ ಕಿಲ್ಲೆ ಬೃಹನ್ಮಠಕ್ಕೆ ಸಲ್ಲುತ್ತದೆ. ಶ್ರಾವಣ ಪುರಾಣದ ಶತಮಾನೋತ್ಸವ ಸಮಾರಂಭ ಹಮ್ಮಿಕೊಂಡಿರುವುದು ತಮಗೆ ಅಪಾರ ಸಂತೋಷ ತಂದಿದೆ. ಇಂದಿನ ಶಾಂತಮಲ್ಲ ಶ್ರೀಗಳು ಈ ಭಾಗದಲ್ಲಿ ಧರ್ಮ ಸಂಸ್ಕೃತಿ ಬೆಳೆಸುತ್ತ ಮತ್ತು ಗುರು ಪರಂಪರೆಯ ಮೌಲ್ಯಗಳನ್ನು ಬೋಧಿಸುತ್ತಾ ಮುನ್ನಡೆದಿರುವುದು ಎಲ್ಲಿಲ್ಲದ ಹರುಷ ತಂದಿದೆ ಎಂದರು.



> ನೇತೃತ್ವ ವಹಿಸಿದ ಕಿಲ್ಲೇ ಬೃಹನ್ಮಠದ ಶಾಂತಮಲ್ಲ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಗುರಿಯೆಡೆಗೆ ತಲುಪುವ ದಾರಿ ಯಾವುದೆಂಬುದನ್ನು ಅರಿತು ನಡೆಯಬೇಕು. ಜೀವನದಲ್ಲಿ ಕಷ್ಟಗಳು ಬಂದಾಗ ಯಾರ ಹತ್ತಿರ ಸಲಹೆ ಕೇಳುತ್ತೇವೆ ಎಂಬುದು ಮುಖ್ಯ. ಯಾಕೆಂದರೆ ದುರ್ಯೋಧನ ಶಕುನಿಯ ಹತ್ತಿರ ಸಲಹೆ ಕೇಳುತ್ತಿದ್ದ. ಆದರೆ ಅರ್ಜುನ ಶ್ರೀ ಕೃಷ್ಣನ ಬಳಿ ಸಲಹೆ ಕೇಳುತ್ತಿದ್ದ. ಸಕಲ ಜೀವಾತ್ಮರಿಗೆ ಸದಾ ಒಳಿತನ್ನೇ ಬಯಸಿದ ವೀರಶೈವ ಧರ್ಮ ಸಿದ್ಧಾಂತದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರು ಜೀವನ ಮೌಲ್ಯಗಳ ಪರಿಪಾಲನೆ ಮತ್ತು ಅವುಗಳಿಂದ ಉಂಟಾಗುವ ಜ್ಞಾನವನ್ನು ಪಡೆದು ಬಾಳಬೇಕೆಂದರು.


ನೀಲುಗಲ್ ಡಾ. ಪಂಚಾಕ್ಷರ ಶಿವಾಚಾರ್ಯರು, ದೇವದುರ್ಗದ ಕಪಿಲ ಸಿದ್ಧರಾಮ ಶಿವಾಚಾರ್ಯರು, ಗಬ್ಬೂರು ಬೂದಿಬಸವ ಶಿವಾಚಾರ್ಯರು, ಕರೇಗುಡ್ಡ ಮಹಾಂತಲಿಂಗ ಶಿವಾಚಾರ್ಯರು, ನವಿಲಕಲ್ ಅಭಿನವ ಸೋಮನಾಥ ಶಿವಾಚಾರ್ಯರು, ಸೋಮವಾರಪೇಟೆ ಅಭಿನವ ರಾಚೋಟೇಶ್ವರ ಶಿವಾಚಾರ್ಯರು, ಸುಲ್ತಾನಪುರದ ಶಂಭು ಸೋಮನಾಥ ಶಿವಾಚಾರ್ಯರಿಗೆ ಗುರು ಕಾರುಣ್ಯ' ಪ್ರಶಸ್ತಿಯಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು. ತೆಂಡೆಕೆರೆ ಗಂಗಾಧರ ಶಿವಾಚಾರ್ಯರು, ಸ್ಟೇಷನ್ ಬಬಲಾದ ಶಿವಮೂರ್ತಿ ಶಿವಾಚಾರ್ಯರು, ಮಂಗಳವಾರಪೇಟೆ ವೀರಸಂಗಮೇಶ್ವರ ಶಿವಾಚಾರ್ಯರು, ರೌಡಕುಂದ ಸಿದ್ಧರಾಮ ಶರಣರು, ಚೇಗುಂಟ ಡಾ. ಕ್ಷೀರಲಿಂಗ ಶರಣರು, ಜಾಗಟಗಲ್ ಬೆಟ್ಟದಯ್ಯಪ್ಪ ತಾತ ಮತ್ತು ಸಾಂಬಯ್ಯಪ್ಪ ತಾತ ಸಮಾರಂಭದ ಸಮ್ಮುಖವನ್ನು ವಹಿಸಿದ್ದರು.

ಸಮಾರಂಭವನ್ನು ಉದ್ಘಾಟಿಸಿ ಶ್ರೀ ಗುರುಪಾದ ಶಿವಯೋಗೀಶ್ವರ ಪುರಾಣ ಗ್ರಂಥವನ್ನು ಲೋಕಾರ್ಪಣೆ ಮಾಡಿದ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವ ಎನ್. ಎಸ್. ಬೋಸರಾಜ ಮಾತನಾಡಿ, ಕತ್ತಲಲ್ಲಿ ಬೆಳಕಿನ, ಬಿಸಿಲಿನಲ್ಲಿ ನೆರಳಿನ ಮತ್ತು ಜೀವನದ ದಾರಿಯಲ್ಲಿ ಸಾಗುವಾಗ ಒಳ್ಳೆಯವರ ಒಡನಾಟದ ಅವಶ್ಯಕತೆಯಿದೆ. ಜೀವನ ಅನಿಶ್ಚತೆಯಿಂದ ತುಂಬಿದೆ. ಬದುಕಿನಲ್ಲಿ ಒಬ್ಬ ಶ್ರೇಷ್ಠ ಗುರು ಮತ್ತು ಗುರಿ ಹೊಂದಿ ಬದುಕನ್ನು ಸಾರ್ಥಕಪಡಿಸಿಕೊಳ್ಳಬೇಕೆಂದರು.

ಶ್ರಾವಣ ಒಂದು ತಿಂಗಳ ಕಾಲ ಪುರಾಣ ಪ್ರವಚನ ಮಾಡಿದ ಮಟ್ಟಿಮಲ್ಲಾಪುರ ಶಾಂತಾಶ್ರಮದ ನಿಜಾನಂದ ಸ್ವಾಮಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ವಿಶೇಷ ಗುರುರಕ್ಷೆಯಿತ್ತು ಶುಭ ಹಾರೈಸಿದರು.

ಸ್ಫೂರ್ತಿ ಇಂಡಿಯನ್ ಡ್ಯಾನ್ಸ್ ಅಕಾಡೆಮಿ ತಂಡದವರಿಂದ ಪ್ರಾರ್ಥನೆ, ಡಾ. ಬಿ.ವಿಜಯರಾಜೇಂದ್ರ ಇವರಿಂದ ಸ್ವಾಗತ ಜರುಗಿತು. ಶಿವಮೊಗ್ಗದ ಹೆಚ್.ಶಾಂತಾ ಆನಂದ ನಿರೂಪಿಸಿದರು. ಸಮಾರಂಭದ ನಂತರ ಲಕ್ಷ್ಮಿ ಕರಿಯಪ್ಪ ತುಳಸಿಕಟ್ಟೆ ಅವರಿಂದ ಬಂದ ಸಕಲ ಸದ್ಭಕ್ತರಿಗೆ ಅನ್ನ ದಾಸೋಹ ಜರುಗಿತು.

## ಪ್ರಾಮಾಣಿಕ ಬಾಲಕನಿಗೆ ಸಚಿವರಿಂದ ಸನ್ಮಾನ




■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ದಾರಿಯಲ್ಲಿ ಹೋಗುವಾಗ ಇಲ್ಲಿನ ಬಾಲಕನೊಬ್ಬನಿಗೆ ಚಿನ್ನವಿರುವ ಬ್ಯಾಗೊಂದು ಸಿಕ್ಕಿದ್ದು, ಅದನ್ನು ಗ್ರಾಮ ಪಂಚಾಯಿತಿಗೆ ಒಪ್ಪಿಸಿ ಪ್ರಾಮಾಣಿಕತೆ ಮೆರೆದ ಬಾಲಕನನ್ನು ಸಚಿವ ಎಚ್.ಕೆ. ಪಾಟೀಲ ಸನ್ಮಾನಿಸಿ ಗೌರವಿಸಿದರು.

ಅಮನ್ (12) ಎಂಬ ಬಾಲಕನಿಗೆ 3 ತೊಲೆ ಬಂಗಾರದ ಆಭರಣವಿರುವ ಕೈಚೀಲ ಸಿಕ್ಕಿತ್ತು. ಅದನ್ನು ಪ್ರಮಾಣಿಕವಾಗಿ ಗ್ರಾ.ಪಂ ಅಧ್ಯಕ್ಷರಿಗೆ ತಲುಪಿಸಿದ್ದ. ಈತನ ಪ್ರಾಮಾಣಿಕ ನಡೆಯನ್ನು ಮೆಚ್ಚಿ ಭಾನುವಾರ ಇಲ್ಲಿಯ ಹಾಲಗೊಂಡ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ನಡೆದ ಅರಕ್ಷಿತ ಸ್ಮಾರಕಗಳ ಅಭಿವೃದ್ಧಿ ಕಾಮಗಾರಿಗಳ ಸಮಾರಂಭದಲ್ಲಿ ಸನ್ಮಾನಿಸಿ ಮಾತನಾಡಿದ ಸಚಿವರು, ಈ ಬಾಲಕನಿಗೆ ಮತ್ತೊಂದು ವೇದಿಕೆಯಲ್ಲಿ ಪ್ರಶಸ್ತಿ ನೀಡುವ ವ್ಯವಸ್ಥೆಯನ್ನು ಮಾಡಬೇಕು ಎಂದು ವೇದಿಕೆಯಲ್ಲಿದ್ದ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸೂಚಿಸಿದರು.

ಬಾಲಕ ಅಮನ್ ಪೊಲೀಸ್ ಪೇದೆ ಶಾಹೀದ್‌ಸಾಬ ವಡಗೇರಿ ಅವರ ಪುತ್ರನಾಗಿದ್ದಾನೆ. ಈ ಸಂದರ್ಭದಲ್ಲಿ ಶಾಸಕರಾದ ಸಿ.ಸಿ. ಪಾಟೀಲ, ಜಿ.ಎಸ್. ಪಾಟೀಲ, ವಿ.ಪ ಸದಸ್ಯ ಎಸ್.ವಿ. ಸಂಕನೂರು, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಇದ್ದರು.

ವಾರದ ಹಿಂದೆ ತರಕಾರಿ ಸಂತೆ ನಡೆದ ದಾರಿಯಲ್ಲಿ ಬಾಲಕ ಹೋಗುವಾಗ ಸಣ್ಣದೊಂದು ಬ್ಯಾಗ್(ಪರ್ಸ್) ಸಿಕ್ಕಿದ್ದು, ಅದನ್ನು ತೆರೆದು ನೋಡಿದಾಗ ಅದರಲ್ಲಿ ಆಭರಣಗಳು ಇರುವುದು ಗೊತ್ತಾಗಿದೆ. ಅದನ್ನು ಮನೆಗೆ ತೆಗುದುಕೊಂಡು ಹೋಗಿ ತಾಯಿಗೆ ತೋರಿಸಿದ್ದಾನೆ. ಅದರಲ್ಲಿ ಅಂದಾಜು 3 ತೊಲೆ ಬಂಗಾರದ ಆಭರಣಗಳು ಇರುವುದು ಗೊತ್ತಾಗಿದೆ. ತಕ್ಷಣವೇ ಅದನ್ನು ಗ್ರಾ.ಪಂ ಅಧ್ಯಕ್ಷರಿಗೆ ತಲುಪಿಸಲಾಗಿದೆ. ಅದಕ್ಕೂ ಪೂರ್ವ ಕಳೆದುಕೊಂಡವರು ಮಸೂತಿಯಲ್ಲಿರುವ ಧ್ವನಿವರ್ಧಕ ಮೂಲಕ ಹೇಳಿಸಿದ್ದರು. ಅವರದೇ ಖಾತರಿ ಎನ್ನುವುದನ್ನು ಪರೀಶಿಲಿಸಲು ಗ್ರಾ.ಪಂಗೆ ಕರೆಯಿಸಿ ನಂತರ ಪರ್ಸ್ ಕಳೆದುಕೊಂಡವರಿಗೆ ಒಪ್ಪಿಸಿದ್ದರು.



ಲಕ್ಕುಂಡಿಯಲ್ಲಿ ನಡೆದ ಅರಕ್ಷಿತ ಸ್ಮಾರಕಗಳ ಅಭಿವೃದ್ಧಿ ಕಾಮಗಾರಿಗಳ ಕಾರ್ಯಕ್ರಮದಲ್ಲಿ ಹಾಲಗೊಂಡ ಬಸವೇಶ್ವರ ಸೇವಾ ಸಮಿತಿಯ ಸದಸ್ಯರು ಅಪೂರ್ಣವಾಗಿರುವ ದಾನಚಿಂತಾಮಣಿ ಅತ್ತಿಮಬ್ಬೆ ಸ್ಮಾರಕ ಭವನ ಅಭಿವೃದ್ಧಿಗಾಗಿ ಅನುದಾನ ಮಂಜೂರಿ ಮಾಡಬೇಕೆಂದು ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಅವರಿಗೆ ಮನವಿ ಪತ್ರ ಸಲ್ಲಿಸಿದರು.



ನೇಪಾಳದಲ್ಲಿ ನಡೆದ ಅಂತಾರಾಷ್ಟ್ರೀಯ ಕುಸ್ತಿ ಪಂದ್ಯಾವಳಿಯಲ್ಲಿ ಲಕ್ಕುಂಡಿಯ ಗ್ರಾಮ ಪಂಚಾಯಿತಿ ಸದಸ್ಯ, ರಾಜ್ಯಮಟ್ಟದ ಕುಸ್ತಿಪಟು ರಮೇಶ ಭಾವಿ ಅವರಿಗೆ ಬಂಗಾರದ ಪದಕ ದೊರೆತ ಹಿನ್ನೆಲೆಯಲ್ಲಿ ಲಕ್ಕುಂಡಿ ಅರಕ್ಷಿತ ಸ್ಮಾರಕಗಳ ಅಭಿವೃದ್ಧಿ ಕಾಮಗಾರಿಗಳ ಕಾರ್ಯಕ್ರಮದಲ್ಲಿ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಅವರು ಸನ್ಮಾನಿಸಿದರು.

### ಸೆ.15ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಪೂರ್ವಭಾವಿ ಸಭೆ

## ಸರ್ವರೂ ಸಹಕರಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇದೇ ಸೆ.15ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನ ಆಚರಿಸುವ ನಿಟ್ಟಿನಲ್ಲಿ ಅಂದು ಮಾನವ ಸರಪಳಿ ನಿರ್ಮಿಸುವ ಕುರಿತು ತಹಸೀಲ್ದಾರರ ಅಧ್ಯಕ್ಷತೆಯಲ್ಲಿ ಸೋಮವಾರ ತಾ.ಪಂ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ನಡೆಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ತಹಸೀಲ್ದಾರ ವಾಸುದೇವ ಸ್ವಾಮಿ ಮಾತನಾಡಿ, ರಾಜ್ಯದ ವಿವಿಧ ಇಲಾಖೆಗಳ ಸಚಿವರ, ಅಧಿಕಾರಿಗಳ ಸಭೆಯಲ್ಲಿ ನಿರ್ಧರಿಸಿದಂತೆ ಸೆ.15ರಂದು ಬೆಳಿಗ್ಗೆ 9 ಗಂಟೆಯಿಂದ ಮಾನವ ಸರಪಳಿ ನಿರ್ಮಿಸಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮವನ್ನು ಆಚರಿಸಲು ನಿರ್ದೇಶನ ನೀಡಲಾಗಿದೆ. ತಾಲೂಕಿನ ಬಾಲೇಹೊಸೂರ ಸರಹದ್ದಿನಿಂದ ಪ್ರಾರಂಭವಾಗಿ ಸೂರಣಗಿ, ನೆಲೋಗಲ್ ಗ್ರಾಮದ ಸರಹದ್ದಿನವರೆಗೆ ಸುಮಾರು 18 ಕಿ.ಮಿ ಮಾನವ ಸರಪಳಿ ನಿಮಾಣ ಮಾಡಬೇಕಿದೆ. ಸದರಿ ಕಾರ್ಯಕ್ರಮಕ್ಕೆ ತಾಲೂಕಿನ ಎಲ್ಲ ಇಲಾಖೆಗಳ ತಾಲೂಕು ಹೋಬಳಿ, ಗ್ರಾಮ ಮಟ್ಟದ ಅಧಿಕಾರಿ– ಸಿಬ್ಬಂದಿಗಳು, ಅರೆ ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳು ಮತ್ತು ಸರ್ಕಾರಿ, ಅನುದಾನಿತ, ಅನುದಾನ ರಹಿತ ಪ್ರಾಥಮಿಕ, ಪ್ರೌಢಶಾಲೆ, ಕಾಲೇಜುಗಳ ಪ್ರಾಚಾರ್ಯರು, ಉಪನ್ಯಾಸಕರು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಬೋಧಕೇತರ ಸಿಬ್ಬಂದಿಗಳು, ವಿವಿಧ ಕನ್ನಡಪರ ಸಂಘಟನೆಗಳು, ದಲಿತಪರ, ರೈತ ಸಂಘಟನೆಗಳು, ಸ್ತ್ರೀಶಕ್ತಿ ಮಹಿಳಾ ಸ್ವ–ಸಹಾಯ ಸಂಘಗಳು ಹಾಗೂ ಸಾರ್ವಜನಿಕರು ಭಾಗ ವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ತಿಳಿಸಿದರು.



ಮಾನವ ಸರಪಳಿ ನಿರ್ಮಾಣಕ್ಕಾಗಿ ಅವಶ್ಯಕವಿರುವ ಮಾನವ ಸಂಪನ್ಮೂಲವನ್ನು ಕ್ರೋಢೀಕರಿಸಲು ತಾಲೂಕಿನಲ್ಲಿ ಎಲ್ಲ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು, ಶಾಲಾ–ಕಾಲೇಜುಗಳ ಸಿಬ್ಬಂದಿಗಳು ಭಾಗಹಿಸುವಂತೆ ಆಯಾ ಇಲಾಖೆಯ ಅಧಿಕಾರಿಗಳು ಮೇಲ್ವಿಚಾರಣೆ ಮಾಡುವುದು. ಮಹಿಳಾ ಮಕ್ಕಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಶಿಕ್ಷಕಿಯರು ಹಾಗೂ ಸಿಬ್ಬಂದಿಗಳು ಮತ್ತು ಮಹಿಳಾ ಸ್ವ–ಸಹಾಯ ಸಂಘಗಳ ಅಧಿಕಾರಿಗಳು ಕಡ್ಡಾಯವಾಗಿ ಹಾಜರಿರುವಂತೆ ಕ್ರಮವಹಿಸಲು ಹಾಜರಿರುವಚಿತೆ ಶಿಶು ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಮಾನವ ಸರಪಳಿಯಲ್ಲಿ ರಕ್ಷಣಾ ದೃಷ್ಟಿಯಿಂದ ಮಾನವ ಸರಪಳಿ ಉದ್ದಕ್ಕೂ ಅಲ್ಲಲ್ಲಿ ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ನಿಯೋಜಿಸುವದು, ಆರೋಗ್ಯ ಸಿಬ್ಬಂದಿಗಳನ್ನು ಪ್ರಥಮ ಚಿಕಿತ್ಸಾ ಪೆಟ್ಟಿಗೆ, ಅವಶ್ಯಕ ಔಷಧಿಗಳೊಂದಿಗೆ ಹಾಜರಿರುವಂತೆ ಸೂಚಿಸಲಾಯಿತು. ಈ ಸಂದರ್ಭದಲ್ಲಿ ತಾ.ಪಂ ಇ.. ಕೃಷ್ಣಪ್ಪ ಧರ್ಮರ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮಹೇಶ ಪೋತದಾರ, ಪಿಎಸ್‌ಐ ಈರಪ್ಪ ರಿತ್ತಿ ಸೇರಿದಂತೆ ತಾಲೂಕಿನ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

> ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ನಡೆಯುವ ಮಾನವ ಸರಪಳಿ ಕಾರ್ಯಕ್ರಮದಲ್ಲಿ ಎಲ್ಲ ಇಲಾಖೆಗಳು ಸಕಲ ಸಿದ್ಧತೆಗಳನ್ನು ಮಾಡಿಕೊಂಡು ಯಶಸ್ವಿಗೊಳಿಸಬೇಕು. ಅಂದು ಮುಂಜಾನೆ 9.15ಕ್ಕೆ ಸಂವಿಧಾನ ಪೀಠಿಕೆಯನ್ನು ನೀಡುವದರಿಂದ ಎಲ್ಲ ಜನರಿಗೆ ಸಂವಿಧಾನದ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ ಉತ್ತಮವಾಗಲಿದೆ.
>
> **– ಡಾ. ಚಂದ್ರು ಲಮಾಣಿ. ಶಾಸಕರು, ಶಿರಹಟ್ಟಿ.**

> ಮಾನವ ಸರಪಳಿ ಯಶಸ್ವಿಗಾಗಿ 18 ಕಿ.ಮೀ.ಉದ್ದಕ್ಕೂ ಬರುವ ಗ್ರಾಮಗಳಲ್ಲಿ ಗ್ರಾಮ ಸಭೆಗಳನ್ನು ಮಂಗಳವಾರದಿಂದ ನಡೆಸಿ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಮಂಗಳವಾರ ಮುಂಜಾನೆ 10 ಗಂಟೆಗೆ ಸೂರಣಗಿ, 12 ಗಂಟೆಗೆ ಬಾಲೇಹೊಸೂರು, ಹಾಗೂ ಮಧ್ಯಾಹ್ನ 2 ಗಂಟೆಗೆ ನೆಲೊಗಲ್ ಗ್ರಾಮದಲ್ಲಿ ಸಭೆ ನಡೆಯಲಿದ್ದು, ಜನಪ್ರತಿನಿಧಿಗಳು, ಮುಖಂಡರು, ಸಂಘ ಸಂಸ್ಥೆಗಳು ಪಾಲ್ಗೊಂಡು ಯಶಸ್ವಿಗೊಳಿಸಬೇಕು.
>
> **– ಕೃಷ್ಣಪ್ಪ ಧರ್ಮರ. ತಾ.ಪಂ ಇಓ.**

## ಪರಿಸರ ಸ್ನೇಹಿ ಗಣಪನಿಗೆ ಬೇಡಿಕೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಭಾದ್ರಪದ ಶುಕ್ಲದ ಚೌತಿಯಂದು ಎಲ್ಲರ ಮನಗೆ ಆಗಮಿಸಿದ ಗಣೇಶನನ್ನು ಭಕ್ತರು ಸಡಗರ, ಸಂಭ್ರಮಗಳಿಂದ ಬರಮಾಡಿಕೊಂಡರು. ಪಟಾಕಿಗಳನ್ನು ಸಿಡಿಸುವ ಮೂಲಕ, ಗುಲಾಲು ಉಗ್ಗಿ ತಮ್ಮ ಸಂತಸವನ್ನು ವ್ಯಕ್ತಪಡಿಸಿದರು. ಕೆಲವು ಕಡೆ ಡೊಳ್ಳು, ಜಾಂಜ್ ಮೇಳಗಳ ಮೂಲಕ ಗಣಪನನ್ನು ನಿಗದಿತ ಸ್ಥಳಕ್ಕೆ ಕೊಂಡೊಯ್ದು ಪ್ರತಿಷ್ಠಾಪನೆ ಮಾಡಲಾಯಿತು.

ಈ ಸಾರೆ ಬಹಳಷ್ಟು ಜನರು ಪರಿಸರ ಸ್ನೇಹಿ ಗಣಪನನ್ನು ಪೂಜಿಸಲು ಉತ್ಸುಕತೆ ತೋರಿದ್ದು ಎಲ್ಲರಲ್ಲಿ ಪರಿಸರ ಜಾಗೃತಿ ಮೂಡಿದೆ ಎಂಬುದಕ್ಕೆ ಸಾಕ್ಷಿಯಾದಂತಿತ್ತು. ಬಹುತೇಕ ಕಡೆಗಳಲ್ಲಿ ಮಣ್ಣಿನ ಗಣಪನನ್ನೇ ಪ್ರತಿಷ್ಠಾಪನೆ ಮಾಡಿದ್ದು ಕಂಡು ಬಂದಿತು.

ಕಳೆದ ಸಾರೆಗಿಮತ ಈ ಸಾರೆಯ ಗಣೇಶೋತ್ಸವ ಹೆಚ್ಚಿನ ಸಡಗರ ಸಂಭ್ರಮಗಳಿಂದ ಕಂಗೊಳಿಸುತ್ತಿತ್ತು. ಕಳೆದ ಬಾರಿ ಮಳೆ ಇಲ್ಲದೆ ಬರದ ಛಾಯೆ ಆವರಿಸಿದ್ದ ಹಿನ್ನೆಲೆಯಲ್ಲಿ ಜನರಲ್ಲಿ ಗಣೇಶೋತ್ಸವವನ್ನು ಆಚರಿಸಲು ಅಷ್ಟೊಂದು ಉತ್ಸುಕತೆ ಇರಲಿಲ್ಲ. ಆದರೆ ಈ ಸಾರೆ ಪ್ರಾರಂಭದಿಂದಲೇ ಚೆನ್ನಾಗಿ ಸುರಿದ ಮಳೆ ಸ್ವಲ್ಪ ಹೆಚ್ಚೇ ಎನ್ನುವಂತೆ ಸುರಿದದ್ದು, ರೈತಾಪಿ ವರ್ಗದಲ್ಲಿ ಹೆಚ್ಚಿನ ಸಂತೋಷ ಉತ್ಸಾಹವನ್ನು ತುಂಬಿತ್ತು.

ಸಾಯಂಕಾಲ ಮಹಿಳೆಯರು, ಮಕ್ಕಳು, ಯುವಕರು ಬೇರೆ ಬೇರೆ ವೈವಿಧ್ಯಮಯ ಗಣಪನನ್ನು ನೋಡಲು, ದರುಶನ ಪಡೆದು ಆಶೀರ್ವಾದ ಬೇಡಲು ಅಲಂಕೃತರಾಗಿ ತೆರಳುತ್ತಿರುವ ದೃಶ್ಯ ಸಾಮಾನ್ಯವಾಗಿತ್ತು.

## ಪೊಲೀಸ್ ಪಡೆಯಿಂದ ಪಥ ಸಂಚಲನ



■ ವಿಜಯಸಾಕ್ಷಿ ಸುದ್ದಿ, ಡಂಬಳ

ಗೌರಿ ಗಣೇಶ ಮತ್ತು ಈದ್ ಮಿಲಾದ್ ಹಬ್ಬದ ನಿಮಿತ್ತ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಡಿವಾಯ್‌ಎಸ್‌ಪಿ ಅವರ ಮಾರ್ಗದರ್ಶನದಡಿ ಮುಂಡರಗಿ ಸಿಪಿಐ ಮಂಜುನಾಥ ಕುಸಗಲ್ ನೇತೃತ್ವದಲ್ಲಿ ಗ್ರಾಮದ ವಿವಿಧ ರಸ್ತೆಗಳಲ್ಲಿ ಪಥ ಸಂಚಲನ (ರೂಟ್ ಮಾರ್ಚ್) ನಡೆಸಿದರು.

ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಶಾಂತಿ–ಸೌಹಾರ್ಧತೆಯಿಂದ ಹಬ್ಬಗಳನ್ನು ಆಚರಿಸುವಂತಾಗಬೇಕು. ಸಾರ್ವಜನಿಕರಲ್ಲಿ ಆತ್ಮವಿಶ್ವಾಸ ತುಂಬಲು ಹಾಗೂ ಪೊಲೀಸ್ ಪಡೆಯ ಸಿದ್ಧತೆಯನ್ನು ಪ್ರದರ್ಶಿಸಲು ಪೊಲೀಸ್ ಪಡೆಯಿಂದ ಜನಸ್ನೇಹಿ ಭಾಗವಾಗಿ ಪೊಲೀಸ್ ವರಿಷ್ಠಾಧಿಕಾರಿ, ಡಿವಾಯ್‌ಎಸ್‌ಪಿ ಅವರ ಮಾರ್ಗದರ್ಶನದಂತೆ ಮುಂಡರಗಿ ಸಿಪಿಐ ಮಂಜುನಾಥ ಕುಸಗಲ್ ನೇತೃತ್ವದಲ್ಲಿ ರೂಟ್ ಮಾರ್ಚ್ ನಡೆಸಿದರು.

ಪೊಲೀಸ್ ಠಾಣೆಯಿಂದ ಹೊರಟ ಪಥಸಂಚನಲ ಮುಖ್ಯ ಬಜಾರನಿಂದ ಚಾವಾಡಿ ಮಾರ್ಗವಾಗಿ ಗ್ರಾಮ ಪಂಚಾಯಿತಿ ಮುಂಭಾಗವಾಗಿ ವಿವಿಧ ಬಡಾವಣೆಗಳ ಮೂಲಕ ಸಾಗಿತು. ಡಂಬಳ ಎಎಸ್‌ಐ ವೀರಣ್ಣ ತಂತ್ರಿ, ಬಸುರಾಜ ಬಣಕಾರ, ಪೊಲೀಸ್ ಸಿಬ್ಬಂದಿವರ್ಗದವರು ಇದ್ದರು.

### ಕುಡಿಯುವ ನೀರಿಗಾಗಿ ಪುರಸಭೆಗೆ ಮುತ್ತಿಗೆ ಹಾಕಿದ ಮಹಿಳೆಯರು

# ಮಳೆಗಾಲದಲ್ಲೂ ಕಾಡುವ ನೀರಿನ ಕೊರತೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕುಡಿಯುವ ನೀರಿಗಾಗಿ ಖಾಲಿ ಕೊಡಗಳೊಂದಿಗೆ ಪುರಸಭೆಗೆ ದೌಡಾಯಿಸಿದ ಮಹಿಳೆಯರು ಕುಡಿಯುವ ನೀರಿನ ಅವ್ಯವಸ್ಥೆ ಮತ್ತು ಮೂಲಭೂತ ಸೌಲಭ್ಯಕ್ಕಾಗಿ ಆಗ್ರಹಿಸಿ ಪುರಸಭೆ ಮುಂದೆ ಪ್ರತಿಭಟನೆ ನಡೆಸಿದ ಘಟನೆ ಮಂಗಳವಾರ ನಡೆಯಿತು.



ಪಟ್ಟಣದಲ್ಲಿ ಇತ್ತೀಚಿನ ವರ್ಷಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿಂದ ಜನತೆ ರೋಸಿ ಹೋಗಿದ್ದಾರೆ. ಮಳೆಗಾಲದಲ್ಲೂ 15-20 ದಿನ ಕಳೆದರೂ ಕುಡಿಯುವ ನೀರು ಬರುತ್ತಿಲ್ಲ. ಜನತೆಗೆ ಸವಳು ನೀರೇ ಗತಿಯಾಗಿದೆ. ಸಹನೆ ಮೀರಿದ ಸಾರ್ವಜನಿಕರು ಸ್ಥಳೀಯ ಪುರಸಭೆ ಮತ್ತು ಜನಪ್ರತಿನಿಧಿಗಳಿಗೆ ಹಿಡಿಶಾಪ ಹಾಕುತ್ತಿದ್ದಾರೆ.

ಪಟ್ಟಣದ ವಾರ್ಡ್ ನಂ-10, 16, 17 ಸೇರಿದಂತೆ ಇತರೇ ವಾರ್ಡಿನ ಮಹಿಳೆಯರು ಮಂಗಳವಾರ ಪುರಸಭೆಗೆ ದೌಡಾಯಿಸಿ ಮುಖ್ಯಾಧಿಕಾರಿ ಮತ್ತು ಪುರಸಭೆ ಅಧ್ಯಕ್ಷರ ವಿರುದ್ಧ ಹರಿಹಾಯ್ದರು. ಈ ವೇಳೆ ತೀವ್ರ ಆಕ್ಷೇಪವೆತ್ತಿದ ಮಹಿಳೆಯರು ಕಳೆದ 20 ದಿನಗಳಿಂದ ನದಿ ನೀರು ಬಂದಿಲ್ಲ. ಈ ಸಮಸ್ಯೆ ಕಳೆದ ಹಲವು ವರ್ಷಗಳಿಂದಲೂ ನಿರ್ಮಾಣವಾಗಿದ್ದು, ನೀರಿನ ಬವಣೆ ತಪ್ಪದಂತಾಗಿದೆ. 20 ದಿನಗಳಿಗೊಮ್ಮೆ ಬರುವ ನೀರು ಸಂಗ್ರಹಿಸಿ ಬಳಸಬೇಕು ಮತ್ತು ಸಾರ್ವಜನಿಕ ನಳದ ಸವಳು ನೀರು ಬಳಕೆಯಿಂದ ಮಕ್ಕಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಬೇಸಿಗೆಯಲ್ಲಿ ನದಿಯಲ್ಲಿ ನೀರಿಲ್ಲ ಎಂಬ ಕಾರಣ ನೀಡಿದರೆ ಮಳೆಗಾಲದಲ್ಲಿ ಮೋಟರ್ ಪಂಪ್ ದುರಸ್ಥಿ, ಪೈಪಲೈನ್ ಒಡೆದಿದೆ, ವಿದ್ಯುತ್ ಸಮಸ್ಯೆ ಹೀಗೆ ಹತ್ತಾರು ಸಮಸ್ಯೆಗಳ ಕಾರಣ ಹೇಳಿ ಕಳುಹಿಸುತ್ತಿದ್ದೀರಿ ಎಂದು ಅಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಕರವೇ ಸ್ವಾಭಿಮಾನಿ ಸೇನೆ ಜಿಲ್ಲಾಧ್ಯಕ್ಷ ಶರಣು ಗೋಡಿ, ನಾಗೇಶ ಅಮರಾಪೂರ ಮಾತನಾಡಿ, ಜನರಿಗೆ ನೀರು ಸೇರಿದಂತೆ ಮೂಲಭೂತ ಸೌಲಭ್ಯ ಪೂರೈಸುವದು ಪುರಸಭೆ ಕರ್ತವ್ಯವಾಗಿದೆ. ಪುರಸಭೆಯ ಆಡಳಿತ ಮಂಡಳಿ ಮತ್ತು ಶಾಸಕರ ನಡುವಿನ ಭಿನ್ನಾಭಿಪ್ರಾಯದಿಂದ ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆಯಾಗುತ್ತಿದೆ. ಆದಷ್ಟು ಬೇಗ ಕುಡಿಯುವ ನೀರು, ಮೂಲಭೂತ ಸೌಲಭ್ಯ ಕಲ್ಪಿಸದಿದ್ದರೆ ಸಂಘಟನೆಯಿಂದ ಹೋರಾಟ ಮಾಡಲಾಗುತ್ತದೆ ಎಂದರು.

ಈ ವೇಳೆ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ, ಉಪಾಧ್ಯಕ್ಷ ಫಿರ್ದೋಸ್ ಆಡೂರ, ಸದಸ್ಯರಾದ ಬಸವರಾಜ ಓದುನವರ, ಪ್ರವೀಣ ಬಾಳಿಕಾಯಿ, ಪ್ರವೀಣ ಆಚಾರಿ, ಪ್ರಕಾಶ ಮಾದನೂರ, ಗೌರಮ್ಮ, ರತ್ನವ್ವ, ಶೇಖವ್ವ, ನಿರ್ಮಲಾ, ಗೌರಮ್ಮ ಸುಣಗಾರ, ಯಲ್ಲವ್ವ ಗೋಡಿ, ರತ್ನವ್ವ ಹಳ್ಳಿಕೇರಿ, ಮಲ್ಲವ್ವ ಗೋಡಿ ಸೇರಿದಂತೆ ಪುರಸಭೆ ವ್ಯವಸ್ಥಾಪಕಿ, ಮಂಜುಳಾ ಹೂಗಾರ, ಶಿವಾನಂದ ಅಜ್ಜಣ್ಣವರ ಸೇರಿ ವಿವಿಧ ವಾರ್ಡ್‌ಗಳ ಮಹಿಳೆಯರು ಇದ್ದರು.

ಈ ವೇಳೆ ಪ್ರತಿಕ್ರಿಯಿಸಿದ ಮುಖ್ಯಾಧಿಕಾರಿ ಮಹೇಶ ಹಡಪದ, ತುಂಗಭದ್ರಾ ನದಿಯಿಂದ ಪಟ್ಟಣಕ್ಕೆ ನೀರು ಸರಬರಾಜಾಗುವ ಪೈಪ್‌ಲೈನ್ ಎಲ್ಲೆಂದರಲ್ಲಿ ಸೋರುತ್ತಿದೆ. ನೀರೆತ್ತುವ ಪಂಪಸೆಟ್, ಯಂತ್ರೋಪಕರಣಗಳು ಪದೇ ಪದೇ ದುರಸ್ಥಿಗೊಳಗಾಗುತ್ತಿವೆ. ಅಮೃತ 2.0 ಯೋಜನೆಯಡಿಯ 33 ಕೋಟಿ ರೂ ಅನುದಾನದಲ್ಲಿ ಶಾಶ್ವತ ಪರಿಹಾರಕ್ಕೆ ಕ್ರಿಯಾಯೋಜನೆ ಸಿದ್ಧಪಡಿಸಿ ನೀರು ಸರಬರಾಜು ಇಲಾಖೆಗೆ ಕಳುಹಿಸಲಾಗಿದೆ. ಪಂಪ್ ದುರಸ್ಥಿ ಕಾರ್ಯ ನಡೆದಿದ್ದು, 3/4 ದಿನಗಳಲ್ಲಿ ನೀರು ಪೂರೈಕೆಯಾಗಲಿದೆ. ಬೋರ್‌ವೆಲ್‌ಗಳ ಮೂಲಕ ಎಲ್ಲ ವಾರ್ಡುಗಳಲ್ಲಿ ಸಾರ್ವಜನಿಕ ನಲ್ಲಿ ನೀರು ನಿರಂತರ ಸರಬರಾಜಿಗೆ ಕ್ರಮ ಕೈಗೊಳ್ಳಲಾಗುವುದು ಎಂದರು.

## ಸೆ.18ರಂದು ಜಿಲ್ಲಾ ಮಟ್ಟದ ಜನತಾ ದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ



ಸರ್ಕಾರದ ನಿರ್ದೇಶನದಂತೆ ಜಿಲ್ಲಾ ಮಟ್ಟದಲ್ಲಿ ಜನತಾ ದರ್ಶನ ಕಾರ್ಯಕ್ರಮವನ್ನು ಸೆಪ್ಟೆಂಬರ್ 18 ರಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಗದಗ ಜಿಲ್ಲಾಡಳಿತ ಭವನದಲ್ಲಿ ಜನತಾ ದರ್ಶನ ಕಾರ್ಯಕ್ರಮ ಜರುಗಲಿದೆ.

ಗದಗ ಜಿಲ್ಲಾಡಳಿತವು ಜನತಾದರ್ಶನ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಆಯೋಜಿಸಿ ಸಾರ್ವಜನಿಕರ ಮನವಿಗಳಿಗೆ ಪರಿಹಾರವನ್ನು ಒದಗಿಸುವ ನಿಟ್ಟಿನಲ್ಲಿ ಸಾರ್ವಜನಿಕರಿಂದ ಮನವಿಗಳನ್ನು ಸ್ವೀಕರಿಸಲು ಆನ್ ಲೈನ್ ಮೂಲಕ ಗದಗ ಜಿಲ್ಲಾಧಿಕಾರಿಗಳ ವೆಬ್‌ಸೈಟ್ ಃಣಣಠಿ;//ಂಜಚಿಜಚಿ. ಟಿಚಿ.ಏಟ/ ದ್ದರಲ್ಲಿ ಅಳವಡಿಸಲಾದ ಜನತಾ ದರ್ಶನ -2024 ನೇದ್ದರ ಲಿಂಕ್ ನ್ನು ಕ್ಲಿಕ್ ಮಾಡಿ ಮನವಿ ಸಲ್ಲಿಸಲು ಸೆಪ್ಟೆಂಬರ್ 17 ರವರೆಗೆ ಅವಕಾಶ ಕಲ್ಪಿಸಲಾಗಿದೆ.

ಸ್ವೀಕೃತವಾದ ಮನವಿಗಳನ್ನು ಕ್ರೋಢೀಕರಿಸಿ ಆದ್ಯತೆ ಮೇರೆಗೆ ಸೆಪ್ಟೆಂಬರ್ 18 ರಂದು ನಡೆಯುವ ಜಿಲ್ಲಾ ಮಟ್ಟದಲ್ಲಿ ಜನತಾ ದರ್ಶನ ಕಾರ್ಯಕ್ರಮದಲ್ಲಿ ಪರಿಶೀಲನೆಗೆ ತೆಗೆದುಕೊಳ್ಳಲಾಗುವುದು. ಸಾರ್ವಜನಿಕರು ಈ ಕಾರ್ಯಕ್ರಮದ ಸದುಪಯೋಗ ಪಡಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ ಅವರು ತಿಳಿಸಿದ್ದಾರೆ.

# ಲೋಕ ಕಲ್ಯಾಣಕ್ಕಾಗಿ ಗೋಪೂಜೆ



■ವಿಜಯಸಾಕ್ಷಿ ಸುದ್ದಿ, ಗದಗ

ಅನ್ನದಾತರ ಕಷ್ಟಗಳನ್ನು ದೂರ ಮಾಡುವಂತೆ ಹಾಗೂ ಲೋಕ ಕಲ್ಯಾಣಕ್ಕಾಗಿ ಗೋಪೂಜೆ ಮಾಡಲಾಗಿದೆ ಎಂದು ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿಯ ಅಧ್ಯಕ್ಷ ತಿಮ್ಮರೆಡ್ಡಿ ಎಚ್.ಕೋನರೆಡ್ಡಿ ಹೇಳಿದರು.

ಅವರು ನಗರದ ಎ.ಪಿ.ಎಂ.ಸಿ ಯಾರ್ಡ್‌ನಲ್ಲಿ ದಲಾಲ ವರ್ತಕರ ಸಂಘ, ಖರೀದಿದಾರರ ಸಂಘ, ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಪ್ರತಿಷ್ಠಾಪಿಸಿರುವ ಗಣೇಶನಿಗೆ 1001 ಮೋದಕ ಪೂಜೆ, 101 ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮದ ಜೊತೆಗೆ ಗೋಪೂಜೆ ನೆರವೇರಿಸಿ ಮಾತನಾಡಿದರು.

ಗೋಮಾತೆಯ ಉದರದಲ್ಲಿ ಮುಕ್ಕೋಟಿ ದೇವರು ನೆಲೆಸಿರುತ್ತಾರೆ ಎಂದು ವೇದ-ಪುರಾಣಗಳಲ್ಲಿ ಉಲ್ಲೇಖಿಸಲಾಗಿದೆ. ಅದರಂತೆ ಕೋಟಿ ದೇವರನ್ನು ಪೂಜಿಸುವದಕ್ಕಿಂತ ಗೋಮಾತೆಯನ್ನು ಪೂಜಿಸುವದರಿಂದ ಪುಣ್ಯ ಲಭಿಸುವದರ ಜೊತೆಗೆ ಗೋಮಾತೆ ತೃಪ್ತಳಾದರೆ ರೈತರ ಕಷ್ಟಗಳು ದೂರವಾಗಿ ಮಳೆ, ಬೆಳೆ ಸಮೃದ್ಧವಾಗುತ್ತದೆ ಎಂದು ನಂಬಿದವರು ನಾವು. ರೈತರ ಫಸಲು ಚೆನ್ನಾಗಿ ಬಂದರೆ ವರ್ತಕರ ವ್ಯವಹಾರಗಳು ಚೆನ್ನಾಗಿ ನಡೆಯುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿಯ ಗೌರವ ಅಧ್ಯಕ್ಷ ಪ್ರಮೋದ ವಾರಕರ, ಕಾರ್ಯದರ್ಶಿ ರಾಜಶೇಖರ ಮುಧೋಳ, ಉಪಾಧ್ಯಕ್ಷ ರಾಜು ಮೂಲಿಮನಿ, ಚಂದ್ರಕಾಂತ ಸವದತ್ತಿ, ಮಹೇಶ ಗಾಣಗೇರ, ನೀತಿಶ ವಾಲಿ, ಶೇಖಣ್ಣ ಗದ್ದಿಕೇರಿ, ವಸಂತಗೌಡ ಪೊಲೀಸ್‌ಪಾಟೀಲ, ರಾಜು ಗುಡಿಮನಿ, ವಿನಾಯಕ ವಜ್ರೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಬಾಳಿಕಾಯಿ, ಗಿರೀಶ ಅಳವಂಡಿ, ದಯಾನಂದ ದುಂಡಪ್ಪನವರ, ವಿನಯ ಕಾಡಪ್ಪನವರ, ಸಾಗರ ವಜ್ರೇಶ್ವರಿ, ಮುತ್ತಣ್ಣ ಅಂಗಡಿ, ಅಜೀತ ಪುಣೇಕರ, ಮಂಜುನಾಥ ಕವಲೂರ, ಹಾಗೂ ದಲಾಲ ವರ್ತಕರ ಸಂಘ ಮತ್ತು ಖರೀದಿದಾರರ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಇದ್ದರು.

### ಬಿಜೆಪಿ ಸದಸ್ಯತಾ ಅಭಿಯಾನಕ್ಕೆ ಚಾಲನೆ ನೀಡಿದ ಸಿ.ಸಿ. ಪಾಟೀಲ

# ಬಿಜೆಪಿ ಕಾರ್ಯಕರ್ತರ ಪಕ್ಷ

■ವಿಜಯಸಾಕ್ಷಿ ಸುದ್ದಿ, ಗದಗ

ಸಾಮಾನ್ಯ ಕಾರ್ಯಕರ್ತನೊಬ್ಬ ಪಾರ್ಟಿ ಅಧ್ಯಕ್ಷ, ಮುಖ್ಯಮಂತ್ರಿ, ಪ್ರಧಾನಿಯು ಆಗಬಹುದಾದ ನಿಜವಾದ ಕಾರ್ಯಕರ್ತರ ಪಕ್ಷವೆಂದರೆ ಅದು ಬಿಜೆಪಿ ಎಂದು ಶಾಸಕ ಸಿ.ಸಿ. ಪಾಟೀಲ ಹೇಳಿದರು.



ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ನಡೆದ ಸಮಾರಂಭದಲ್ಲಿ ಬಿಜೆಪಿ ಸದಸ್ಯತಾ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತಾನಾಡುತ್ತಿದ್ದರು.

ರಾಷ್ಟ್ರಹಿತವನ್ನೇ ತನ್ನ ಧ್ಯೇಯವನ್ನಾಗಿಸಿಕೊಂಡಿರುವ ಬಿಜೆಪಿ ಯಾವುದೇ ಜಾತಿ, ಮತ, ಪಂಥ ಭಾವವಿಲ್ಲದೆ ಎಲ್ಲಾ ವರ್ಗದ ಜನರನ್ನು ಮುಖ್ಯ ವಾಹಿನಿಗೆ ತರುವ ಮೂಲಕ ಸಂವಿಧಾನದ ಮೂಲ ಆಶಯಗಳನ್ನ ಈಡೇರಿಸುತ್ತಿದೆ ಎಂದರು.

ಪರಶಿಷ್ಟ ಜಾತಿ-ಪಂಗಡ, ಹಿಂದುಳಿದ, ಅಲ್ಪಸಂಖ್ಯಾತ ಮತ್ತು ಇತರೆ ಸಮುದಾಯದ ಜನರನ್ನು ಗುರುತಿಸಿ ಶಾಸಕ, ಸಂಸದ, ಮಂತ್ರಿ, ಮುಖ್ಯಮಂತ್ರಿ ಹೀಗೆ ನಾನಾ ಸ್ಥರದ ಹುದ್ದೆಯವರೆಗೆ ಅವಕಾಶ ಒದಗಿಸುವ ಮೂಲಕ ಪ್ರಜಾಪ್ರಭುತ್ವ ನೀತಿಯನ್ನ ಎತ್ತಿಹಿಡಿಯುವ ಬಿಜೆಪಿ ಜಗತ್ತಿನ ಬಹು ದೊಡ್ಡ ರಾಜಕೀಯ ಪಕ್ಷವಾಗಿದೆ ಎಂದರು.

ಜಿಲ್ಲೆಯ ಜನತೆ 8800002024 ನಂಬರ್‌ಗೆ ಮಿಸ್‌ಕಾಲ್ ಮಾಡುವ ಮುಖಾಂತರ ಸದಸ್ಯರಾಗಬೇಕು ಎಂದು ಅವರು ಮನವಿ ಮಾಡಿದರು.

ನಗರದ ರಾಚೋಟೇಶ್ವರ ದೇವಾಲಯ ಹತ್ತಿರ ಶಾಸಕ ಸಿ.ಸಿ. ಪಾಟೀಲ ಸ್ವತಃ ರೈತರೊಬ್ಬರ ಸದಸ್ಯತ್ವ ಮಾಡುವ ಮೂಲಕ ಮನೆ ಮನೆ ಭೇಟಿ ಅಭಿಯಾನಕ್ಕೆ ಚಾಲನೆ ಕೊಟ್ಟರು. ಸಮಾರಂಭದಲ್ಲಿ ಅಭಿಯಾನದ ಜಿಲ್ಲಾ ಸಂಚಾಲಕ ಹಾಗೂ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಲ್ಲಾಪೂರ, ಜಿಲ್ಲಾ ಅಧ್ಯಕ್ಷ ರಾಜು ಕುರಡಗಿ ಮಾತನಾಡಿದರು.

ಮುಖಂಡರಾದ ಎಮ್.ಎಸ್. ಕರಿಗೌಡ್ರ, ಡಾ. ಶೇಖರ ಸಜ್ಜನರ, ಅನಿಲ ಅಬ್ಬಿಗೇರಿ, ಎಮ್.ಎಮ್. ಹಿರೇಮಠ, ವಿನಾಯಕ ಮಾನ್ವಿ, ನಿರ್ಮಲಾ ಕೊಳ್ಳಿ, ವಿಜಯಲಕ್ಷ್ಮೀ ಮಾನ್ವಿ, ಹೇಮಗಿರೀಶ್ ಹಾವಿನಾಳ, ರವಿ ಕರಿಗಾರ, ಸೋಮೇಶ್ ಉಪನಾಳ, ನಾಗರಾಜ ಕುಲಕರ್ಣಿ, ಸಿದ್ದು ಪಲ್ಲೇದ, ಜಗನ್ನಾತಸಾ ಬಾಂಡಗೆ, ಬಸವಣ್ಣೆಪ್ಪ ಚಿಂಚಲಿ, ಬಿ.ಎಚ್. ಲದ್ವಾ, ರಾಘವೇಂದ್ರ ಯಳವತ್ತಿ, ಚಂದ್ರು ತಡಸದ, ಮಂಜುನಾಥ್ ಮುಳಗುಂದ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಆರ್.ಕೆ. ಚವಾಣ್, ಪಕ್ಕಿರೇಶ್ ರಟ್ಟೀಹಳ್ಳಿ ಮುಂತಾದವರು ಉಪಸ್ಥಿತರಿದ್ದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಭಾರತವನ್ನ ಜಗತ್ತಿನ ಮೂರನೇ ಆರ್ಥಿಕ ಶಕ್ತಿಯನ್ನಾಗಿ ರೂಪಿಸುತ್ತಿರುವ ಮೋದಿಯವರ ಜೊತೆ ಇಡೀ ರಾಷ್ಟ್ರದ ಜನತೆ ನಿಲ್ಲಬೇಕಾಗಿದೆ. ಕಾರ್ಯಕರ್ತರು ಹೆಚ್ಚು ಹೆಚ್ಚು ಸದಸ್ಯರನ್ನು ಬಿಜೆಪಿ ಜೊತೆ ಜೋಡಿಸುವ ಮೂಲಕ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದು ಹೇಳಿದರು.

# ಸಂಸ್ಥಾಪನಾ ದಿನಾಚರಣೆ: ಮುಖ್ಯಮಂತ್ರಿಗಳಿಗೆ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಕೆ. ಪಾಟೀಲರ ನೇತೃತ್ವದಲ್ಲಿ ಕರ್ನಾಟಕ ರಾಜ್ಯ ನದಾಫ್ ಪಿಂಜಾರ ಸಂಘದ ರಾಜ್ಯ ಅಧ್ಯಕ್ಷರಾದ ಜನಾಬ ಹೆಚ್.ಜಲೀಲ್ ಸಾಬರವರ ಉಸ್ತುವಾರಿಯಲ್ಲಿ ಗದಗ ಜಿಲ್ಲೆಯ ಅಧ್ಯಕ್ಷ ಜನಾಬ ಕೆ.ಎಫ್. ಹಳ್ಯಾಳ ಹಾಗೂ ಪದಾಧಿಕಾರಿಗಳು ಸಿಎಂ ಸಿದ್ದರಾಮಯ್ಯರನ್ನು ಭೇಟಿ ಮಾಡಿ ಅಕ್ಟೋಬರ್ 27ರಂದು ಗದಗದಲ್ಲಿ ನಡೆಯಲಿರುವ 32ನೇ ಸಂಸ್ಥಾಪನಾ ದಿನಾಚರಣೆಗೆ ಆಗಮಿಸಲು ಆಹ್ವಾನಿಸಿದರು.



ಜನಾಬ ಫಕರುಸಾಬ ನದಾಫ್ ಕುರ್ತಕೋಟಿ ಮತ್ತು ಕೆ.ಎಫ್ ಹುಲಕೋಟಿ (ರಬ್ಬಾನಿ) ಸಿಎಂ ಮತ್ತು ಸಚಿವರ ಭೇಟಿ ಪ್ರಕ್ರಿಯೆ ಕಾರ್ಯವನ್ನು ಯಶಸ್ವಿಯಾಗಿಸಿದರು.

ಈ ಸಂದರ್ಭದಲ್ಲಿ ರಾಜ್ಯಧ್ಯಕ್ಷ ಜನಾಬ ಹೆಚ್.ಜಲೀಲಸಾಬ, ರಾಜ್ಯ ಉಪಾಧ್ಯಕ್ಷ ಜನಾಬ ಜಿ.ಡಿ. ನದಾಫ್, ರಾಜ್ಯ ಪ್ರಧಾನ ಕಾರ್ಯದರ್ಶಿ ಜನಾಬ ರಿಯಾಜ ಸಲೀಮ್ ನಾಗ್ತೇ, ರಾಜ್ಯ ಖಜಾಂಚಿ ಜನಾಬ ಶಾಬುದ್ದಿನ ನೂರಾಬಾಷ, ಬೆಂಗಳೂರು ವಿಭಾಗೀಯ ವಿಭಾಗದ ಉಪಾಧ್ಯಕ್ಷ ಎಂ.ಡಿ. ಮುನಾಫ, ಗದಗ ಜಿಲ್ಲಾ ಅಧ್ಯಕ್ಷ ಜನಾಬ ಕೆ.ಎಫ್. ಹಳ್ಯಾಳ, ಬೆಂಗಳೂರು ಜಿಲ್ಲಾ ಅಧ್ಯಕ್ಷ ಮಹಮ್ಮದ ರಫಿ, ರಾಜ್ಯ ಸಮಿತಿ ಸದಸ್ಯ ಜನಾಬ ಶರೀಫಸಾಬ ನೂರಾಬಾಷ, ಗದಗ ಜಿಲ್ಲಾ ಕಾರ್ಯದರ್ಶಿ ಎಂ.ಬಿ. ನದಾಫ್ ವಕೀಲರು, ಗದಗ ಜಿಲ್ಲಾ ಸಹಕಾರ್ಯದರ್ಶಿ ಹುಸೇನಸಾಬ ನದಾಫ್ (ಮೌಲಾ), ಗದಗ ಜಿಲ್ಲಾ ಕೋಶಾಧ್ಯಕ್ಷ ಜನಾಬ ಶೌಕತ್ ಅಲಿ ಎಂ.ಅಣ್ಣಿಗೇರಿ, ಗದಗ-ಬೆಟಗೇರಿ ಶಹರ ಆಡಳಿತ ಮಂಡಳಿ ಸದಸ್ಯ ಕೆ.ಎಫ್. ಹುಲಕೋಟಿ( ರಬ್ಬಾನಿ) ಶಹರ ಘಟಕದ ಕಾರ್ಯದರ್ಶಿ ಜನಾಬ ಜಾಕಿರ್ ಬಾಗಲಕೋಟ, ಶಹರ ಸಂಘಟನಾ ಕಾರ್ಯದರ್ಶಿ ಮಹಮ್ಮದ್ ರಫೀಕ ಅಣ್ಣಿಗೇರಿ, ಗದಗ ತಾಲೂಕಾ ಗ್ರಾಮೀಣ ಉಪಾಧ್ಯಕ್ಷ ಜನಾಬ ಫಕರುಸಾಬ ನದಾಫ, ಉಪಾಧ್ಯಕ್ಷ ಜನಾಬ ರಾಜೇಸಾಬ ಶಿಶ್ವಿನಹಳ್ಳಿ ಉಪಸ್ಥಿತರಿದ್ದರು.

# ಶಿವಾನುಭವದಿಂದ ಬದುಕು ಬಂಗಾರ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಸಂಸ್ಕೃತಿ, ಹಬ್ಬಗಳ ಆಚರಣೆಯ ಹಿಂದೆ ಸತ್ಯದ ಅರ್ಥಗಳಿವೆ. ನಮ್ಮ ಸಂಸ್ಕೃತಿ ಆಚರಣೆಗಳು ನಶಿಸುವ ಹಂತದಲ್ಲಿದ್ದು, ಶಿವಾನುಭವದಂತಹ ಕಾರ್ಯಕ್ರಮಗಳು ಪುನರ್ಜೀವನ ನೀಡುವ ಕಾರ್ಯ ಮಾಡುತ್ತವೆ ಎಂದು ಬ್ರಹ್ಮಕುಮಾರಿ ಜಯಂತಿ ಅಕ್ಕನವರು ಹೇಳಿದರು.



ಅವರು ಗದುಗಿನ ಅಡವೇಂದ್ರಸ್ವಾಮಿ ಮಠದಲ್ಲಿ ಜರುಗಿದ 327ನೇ ಶಿವಾನುಭವದಲ್ಲಿ ರಕ್ಷಾ ಬಂಧನ ಹಾಗೂ ಹಬ್ಬಗಳ ಮಹತ್ವ ಕುರಿತು ಉಪನ್ಯಾಸ ನೀಡಿದರು. ಪ್ರತಿ ಸ್ತ್ರೀಯನ್ನು ಕಂಡಾಗಲೂ ಸಹೋದರಿ ಎಂಬ ಭಾವನೆ ಬೆಳೆಯಬೇಕು. ಹೀಗಾಗಿ ಪುರಾಣ, ಇತಿಹಾಸ, ಧರ್ಮಗಳಲ್ಲಿ ರಕ್ಷಾಬಂಧನ ಕುರಿತು ಉಲ್ಲೇಖಗಳಿವೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ತೋಟಗಾರಿಕೆ ಇಲಾಖೆಯ ನಿವೃತ್ತ ನಿರ್ದೇಶಕ ವೀರೇಶ ಕುಂಬಾರ ಮಾತನಾಡಿ, ನಮ್ಮ ಆಚಾರ-ವಿಚಾರ, ಸಂಸ್ಕೃತಿಗಳಿಗೆ, ಮಧುರ ಬಾಂಧವ್ಯಕ್ಕೆ ಬೆಲೆ ಕೊಡುವ ವ್ಯಕ್ತಿಗಳು ಉನ್ನತ ವ್ಯಕ್ತಿಗಳಾಗುತ್ತಾರೆ. ವ್ರತ-ಮಾನ್ಯಗಳು ವ್ಯಕ್ತಿಯಲ್ಲಿ ದೈವತ್ವವನ್ನು ಉಂಟು ಮಾಡುತ್ತವೆ ಎಂದರು.

ಸಮ್ಮುಖ ವಹಿಸಿದ್ದ ಶ್ರೀಮಠದ ಧರ್ಮದರ್ಶಿ ವೇ.ಮೂ ಮಹೇಶ್ವರ ಸ್ವಾಮೀಜಿ ಮಾತನಾಡಿ, ದೇಹವನ್ನು ಅಂತರ್ಮುಖಿಯಾಗಿ ಆಧ್ಯಾತ್ಮಿಕ ದೃಷಿಕೋನದಲ್ಲಿ, ಭಕ್ತಿ ಭಾವದಿಂದ ಭಗವಂತನ ಪ್ರಾರ್ಥನೆಯನ್ನು ಮಾಡಿದಾಗ ಮನುಷ್ಯನಲ್ಲಿ ದೈವತ್ವದ ಗುಣಗಳು ಮೂಡಿ ಬರುತ್ತವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಶಿವಾನುಭವ ಸಮಿತಿಯ ಅಧ್ಯಕ್ಷ ಡಾ. ಎಸ್.ಕೆ. ನಾಲ್ವತ್ತವಾಡಮಠ ಮಾತನಾಡಿ, ಶಿವಾನುಭವಗಳು ಸಾಮಾನ್ಯರಲ್ಲಿ ಆಧ್ಯಾತ್ಮದ ಅರಿವನ್ನು ಉಂಟುಮಾಡಿ ಅವರಲ್ಲಿ ಮೌಲ್ಯಗಳನ್ನು ತುಂಬುತ್ತವೆ ಎಂದರು. ವೀರೇಶ ಕುಂಬಾರ ಹಾಗೂ ನಿವೃತ್ತಿ ಹೊಂದಿದ ಜಿ.ಎಸ್. ಮುಧೋಳ, ಯಮುನಪ್ಪ ರತ್ನಗಿರಿ ಅವರನ್ನು ಸನ್ಮಾನಿಸಲಾಯಿತು.

ಸಿದ್ದಣ್ಣ ಜವಳಿ ಪ್ರಾರ್ಥಿಸಿದರು. ಶಿವಾನುಭವ ಸಮಿತಿ ಕಾರ್ಯದರ್ಶಿ ಬಿ.ಬಿ. ತೋಟಗೇರ ಸ್ವಾಗತಿಸಿದರು. ಪ್ರಭುಗೌಡ ಪಾಟೀಲ ವಂದಿಸಿದರು. ಭಕ್ತಿಸೇವೆಯನ್ನು ವೀರಣ್ಣ ಉಪ್ಪಿನ, ಪ್ರಭುಗೌಡ ಪಾಟೀಲ ಹಾಗೂ ಪ್ರಕಾಶ ಬಂಡಿ ವಹಿಸಿದ್ದರು.

# ಪ್ರಶಸ್ತಿ ಡಾಲಾಯತ್ ಬ್ರದರ್ಸ್ ಮುಡಿಗೆ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಡಾ. ಎಪಿಜೆ ಅಬ್ದುಲ್ ಕಲಾಂ ಕ್ರಿಕೆಟ್ ಪ್ರೀಮಿಯರ್ ಲೀಗ್‌ನ ಫೈನಲ್ ಪಂದ್ಯದಲ್ಲಿ ಟಿಪ್ಪು ವಾರಿಯರ್ಸ್ ಹಾಗೂ ಡಾಲಾಯತ್ ಬ್ರದರ್ಸ್ ನಡುವಿನ ಪಂದ್ಯದಲ್ಲಿ ಡಾಲಾಯತ್ ಬ್ರದರ್ಸ್ ತಂಡವು 1 ರನ್‌ನಿಂದ ರೋಚಕ ಗೆಲುವು ಸಾಧಿಸಿತು.



ಕುಷ್ಟಗಿ ರಸ್ತೆಯ ಮುತ್ತಣ್ಣ ಮೆಣಸಿನಕಾಯಿ ಅವರ ಬಯಲು ಜಾಗೆಯಲ್ಲಿ ಕಳೆದ 21 ದಿನಗಳಿಂದ ನಡೆಯುತ್ತಿದ್ದ ಪಂದ್ಯಾವಳಿಯ ಫೈನಲ್ ಮ್ಯಾಚ್‌ನಲ್ಲಿ 1ನೇ ಓವರ್‌ನಲ್ಲಿಯೇ ನಜೀರ್ ಸರ್ಕಾವಸ್ ಮೊದಲ ವಿಕೆಟ್, ಅನ್ವರ ಕವಲೂರ್ ವಿಕೆಟ್ ಪತನವಾದಾಗ 8 ರನ್ ಆಗಿದ್ದವು. ಹೀಗಾಗಿ ಕೊಂಚ ನಿಧಾನ ಗತಿಗೆ ಆಟಕ್ಕೆ ತಂಡವು ಆದ್ಯತೆ ನೀಡಿತು. 16 ರನ್‌ಗಳಾದಾಗ ಸಲೀಂ ಕಡ್ಲಿಮಟ್ಟಿ ಮತ್ತು 33 ರನ್‌ಗೆ ಗಫಾರ್ ಡಾಲಾಯತ್ ವಿಕೆಟ್ ಉರುಳಿದವು.

6 ಓವರ್‌ನ 4ನೇ ಬಾಲಿಗೆ 40 ರನ್ ಸೇರಿಸಿದ್ದಾಗ 5ನೇ ವಿಕೆಟ್ ಎಂ.ಡಿ. ರಫಿ ಹಾಗೂ 44 ರಜಾಕ್ ಪೊಲೀಸ್ ಮತ್ತು 45 ರನ್ ಆದಾಗ ರಜಾಕ್ ಡಾಲಾಯತ್ ವಿಕೆಟ್ ಕಳೆದುಕೊಂಡ ತಂಡ ಸಂಕಷ್ಟಕ್ಕೆ ಸಿಲುಕಿತ್ತು. 7 ಓವರ್ ಮುಕ್ತಾಯಕ್ಕೆ 65 ರನ್ ಆದಾಗ ಮುನ್ನಾ ಮುಜಾವಾರ ಔಟ್ ಆದರು. ಮೌಲಾ ಬಳ್ಳಾರಿ 11 ಬಾಲ್‌ಗೆ 27 ರನ್ ನೆರವಿನಿಂದ ಡಾಲಾಯತ್ ಬ್ರದರ್ಸ್ ತಂಡವು 10 ಓವರ್‌ನಲ್ಲಿ 79 ರನ್ ಕಲೆಹಾಕಿತು.

ಫಾರಾಕ್ ತಟಗಾರ 2 ಓವರ್ 20 ರನ್ 2 ವಿಕೆಟ್, ಮೈನು 2 ಓವರ್ 13 ರನ್, ಮೈಬು ಹವಾಲ್ದಾರ್ 2 ಓವರ್ 17 ರನ್ 1 ವಿಕೆಟ್, ಸಲೀಂ ಹವಲ್ದಾರ್ 2 ಓವರ್ 14 ರನ್ 1 ವಿಕೆಟ್ ಹಾಗೂ ಯಾಸೀನ್ 2 ಓವರ್ 12 ರನ್ 2 ವಿಕೆಟ್ ಪಡೆದಿದ್ದರಿಂದ ಡಾಲಾಯತ್ ಬ್ರದರ್ಸ್ ತಂಡವನ್ನು 79 ರನ್‌ಗೆ ಕಟ್ಟಿ ಹಾಕಿದರು.

ಡಾಲಾಯತ್ ಬ್ರದರ್ಸ್ ತಂಡ ನೀಡಿದ್ದ 80 ರನ್‌ನ ಗುರಿ ಬೆನ್ನಟ್ಟಿದ ಟಿಪ್ಪು ವಾರಿಯರ್ಸ್ ತಂಡವು ಮೊದಲ ಓವರ್‌ನಲ್ಲೇ ಮೈನು ಡಕೌಟ್ ಹಾಗೂ 2ನೇ ಓವರ್ ಮೊದಲ ಎಸೆತದಲ್ಲಿ 5 ರನ್ ಹೊಡೆದಿದ್ದ ಯಾಸೀನ್ ವಿಕೆಟ್ ಕಳೆದುಕೊಂಡು ತಂಡವು ಒತ್ತಡಕ್ಕೆ ಒಳಗಾಯಿತು. ತಂಡದ ಮೊತ್ತ 30 ರನ್ ಆದಾಗ ಸಲೀಂ ಹವಾಲ್ದಾರ್ 14 ರನ್ ಹೊಡದು ಔಟ್ ಆದರು. ತಂಡದ ಮೊತ್ತ 38 ಆದಾಗ ಸಲೀಂ ನಿಡನಸ್ನೂರ ಹಾಗೂ 46 ಆದಾಗ ಫಾರೂಕ್ ತಟಗಾರ ತಂಡವು ವಿಕೆಟ್ ಕಳೆದುಕೊಂಡಿತು. 8 ಓವರ್ 5 ಬಾಲ್ ಆದಾಗ ತಂಡದ ಮೊತ್ತವು 71 ಆಗಿತ್ತು.

27 ರನ್ ಹೊಡೆದಿದ್ದ ಟಿಪ್ಪು ಸುಲ್ತಾನ್ ತಂಡದ ನಾಯಕ ಬಬ್ಲು ಗೆಲುವು ಸಾಧಿಸುತ್ತಾರೆ ಎನ್ನುವ ನಿರೀಕ್ಷೆಯಲ್ಲಿದ್ದಾಗ ಔಟ್ ಆದರು. ಹೀಗಾಗಿ ಸಂಕಷ್ಟಕ್ಕೆ ಸಿಲುಕಿದ್ದ ತಂಡದ ಆಟಗಾರರಾದ ಅದೇ ಓವರ್‌ನಲ್ಲಿ ಮೈಬೂ ಆರಗಿದ್ದಿ ಸಹ ಔಟ್ ಆದರು. 9 ಓವರ್ 2ನೇ ಬಾಲಿನಲ್ಲಿ 74 ರನ್ ಆದಾಗ ಶಾರುಕ್ ಹವಾಲ್ದಾರ್ ಸಹ ಔಟ್ ಆದರು. ಹೀಗಾಗಿ 6 ರನ್ ಹೊಡೆಯಲು 4 ಬಾಲ್ ಉಳಿದಿದ್ದವು. ಮೈಬು ಹವಾಲ್ದಾರ್ ಹಾಗೂ ದಾವಲ್ ತಾಳಿಕೋಟಿ ಕೇವಲ 4 ರನ್ ಹೊಡೆದ ಪರಿಣಾಮ ತಂಡ 2 ರನ್ ಸೋಲನುಭವಿಸಿತು.

ನಜೀರ್ ಸರ್ಕಾವಸ್ 2 ಓವರ್ 10 ರನ್ 1 ವಿಕೇಟ್, ಸಲೀಂ ಕಡ್ಲಿಮಟ್ಟಿ 2 ಒವರ್ 16 ರನ್ 2 ವಿಕೇಟ್, ರಜಾಕ್ ಪೊಲೀಸ್ 2 ಓವರ್ 19 ರನ್ 1 ವಿಕೇಟ್, ಶಾಹೀಲ್ ಮೋಮಿನ್ 2 ಓವರ್ 13 ರನ್ ನೀಡಿದರು. ಗಫಾರ್ ಡಾಲಾಯತ್ 2 ಓವರ್ 16 ರನ್ 3 ವಿಕೇಟ್ ಪಡೆದ ಗಫರ್ ಡಾಲಾಯಾತ್ ಮ್ಯಾನ್ ಆಫ್ ದಿ ಮ್ಯಾಚ್ ಪ್ರಶಸ್ತಿ ಪಡೆದರು.

## ನಿಧನ ವಾರ್ತೆ

### ಕಾಶಮ್ಮ ವೀರಭದ್ರಪ್ಪ ಹೊನವಾಡ



ನರೇಗಲ್ಲ: ಪಟ್ಟಣದ ಗುಡಿ ಓಣಿ ನಿವಾಸಿ ಕಾಶಮ್ಮ ವೀರಭದ್ರಪ್ಪ ಹೊನವಾಡ ಶನಿವಾರ ನಿಧನರಾದರು. ಅವರಿಗೆ ಇಬ್ಬರು ಪುತ್ರರು, ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗವಿದೆ.

### ಅರ್ಜುನಸಾ ರಾಮಚಂದ್ರಸಾ ಬೇವಿನಕಟ್ಟಿ



ಗದಗ: ನಗರದ ಮುಳಗುಂದ ರಸ್ತೆಯ ಕಿರಣ ಕಂಫರ್ಟ್ಸ್ ಮಾಲೀಕರಾದ ಅಶೋಕ ಅರ್ಜುನಸಾ ಬೇವಿನಕಟ್ಟಿ ಅವರ ತಂದೆ ಅರ್ಜುನಸಾ ರಾಮಚಂದ್ರಸಾ ಬೇವಿನಕಟ್ಟಿ ಇವರು 80ನೇ ವಯಸ್ಸಿನಲ್ಲಿ ನಿಧನರಾದರು.

ಇವರ ಅಂತಿಮಯಾತ್ರೆಯು ಸೆ. 11ರಂದು ಬೆಳಿಗ್ಗೆ 11 ಗಂಟೆಗೆ ಹುಬ್ಬಳ್ಳಿ ರಸ್ತೆಯ ಕೇಶವ ನಗರದಿಂದ ಹೊರಡುವುದು. ಮೃತರು ಪತ್ನಿ, ಇಬ್ಬರು ಪುತ್ರರು, ಮೂವರು ಪುತ್ರಿಯರು, ಸೊಸೆಯಂದಿರು, ಅಳಿಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಸಂತಾಪ: ಗದಗ ಎಸ್.ಎಸ್.ಕೆ. ಸಮಾಜದ ಹಿರಿಯರಾದ ಅರ್ಜುನಸಾ ರಾಮಚಂದ್ರಸಾ ಬೇವಿನಕಟ್ಟಿ ಅವರ ನಿಧನಕ್ಕೆ ಗದಗ ಎಸ್.ಎಸ್.ಕೆ. ಸಮಾಜದ ಪಂಚ ಕಮಿಟಿ, ತರುಣ ಸಂಘ ಸಮಾಜ ಬಾಂಧವರು ಸಂತಾಪ ವ್ಯಕ್ತಪಡಿಸಿದ್ದಾರೆ.

ಜಿಲ್ಲಾ ಮಟ್ಟದ ಮ್ಯಾರಥಾನ್ ಸ್ಪರ್ಧೆಯಲ್ಲಿ ಡಾ. ಎಸ್.ಎಸ್. ನೀಲಗುಂದ

# ಏಡ್ಸ್ ಬಗ್ಗೆ ಸಮುದಾಯದಲ್ಲಿ ಜಾಗೃತಿ ಅವಶ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ ಬೆಂಗಳೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಐ.ಎಮ್.ಎ, ರೋಟರಿ ಸೆಂಟ್ರಲ್ ಗದಗ, ಲಾಯನ್ಸ್ ಕ್ಲಬ್ ಗದಗ-ಬೆಟಗೇರಿ, ನೂರಾನಿ ಟ್ರಸ್ಟ್ ಗದಗ-ಬೆಟಗೇರಿ, ಶಿಕ್ಷಣ ಇಲಾಖೆ, ಕ್ರೀಡಾ ಇಲಾಖೆ, ರಕ್ಷಣೆ ಸಂಸ್ಥೆ, ಸೃಷ್ಟಿ ಸಂಕುಲ ಸಂಸ್ಥೆ, ಚೈತನ್ಯ ಸಂಸ್ಥೆ, ನವಚೇತನ ಸಂಸ್ಥೆ, ಗದಗ ಜಿಲ್ಲೆಯ ಎನ್.ಎಸ್.ಎಸ್. ಘಟಕಗಳು ಹಾಗೂ ರೆಡ್ ರಿಬ್ಬನ್ ಕ್ಲಬ್‌ಗಳ ಸಂಯುಕ್ತ ಆಶ್ರಯದಲ್ಲಿ ಹೆಚ್.ಐ.ವಿ/ಏಡ್ಸ್ ತಡೆಗಟ್ಟಲು ತೀವ್ರತರವಾದ ಐ.ಇ.ಸಿ ಪ್ರಚಾರಾಂದೋಲನ-2024ರ ಅಂಗವಾಗಿ ರೆಡ್ ರಿಬ್ಬನ್ ಕಾಲೇಜು ವಿದ್ಯಾರ್ಥಿಗಳಿಗಾಗಿ 5 ಕಿ.ಮೀ. ಮ್ಯಾರಥಾನ್ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು.

ಮ್ಯಾರಥಾನ್ ಸ್ಪರ್ಧೆಯನ್ನು ಉದ್ಘಾಟಿಸಿದ ಜಿಲ್ಲಾ ಆರೋಗ್ಯ ಮತ್ತು ಕುಂಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ಜಿಲ್ಲೆಯಲ್ಲಿ ಹೆಚ್.ಐ.ವಿ. ಪ್ರಮಾಣ ಇಳಿಮುಖವಾಗಿದ್ದು, ವಿದ್ಯಾರ್ಥಿಗಳು ಹೆಚ್.ಐ.ವಿ ಏಡ್ಸ್ ಬಗ್ಗೆ ಮಾಹಿತಿ ತಿಳಿದುಕೊಂಡು ಸಮುದಾಯದಲ್ಲಿ ಜಾಗೃತಿ ಮೂಡಿಸಬೇಕೆಂದು ಹೇಳಿದರು.

ಪ.ಪೂ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಪ್ರೊ. ಎಸ್.ಬಿ. ಮಾಸನಾಯಕ ಮಾತನಾಡಿ, ವಿದ್ಯಾರ್ಥಿಗಳು ಯೌವನದಲ್ಲಿ ತಮ್ಮ ಜೀವನವನ್ನು ಜೋಪಾನ ಮಾಡಿಕೊಂಡು ಆರೋಗ್ಯಕರ ನಡುವಳಿಕೆಗಳನ್ನು ರೂಪಿಸಿಕೊಳ್ಳಲು ಕರೆ ನೀಡಿದರು.



> ಹೆಚ್.ಐ.ವಿ. ಏಡ್ಸ್ ಮಾರಣಾಂತಿಕ ಖಾಯಿಲೆಯಾಗಿದ್ದು, ಇದನ್ನು ತಡೆಗಟ್ಟಲು ಯುಜನರಲ್ಲಿ ಅರಿವು ಮತ್ತು ಜಾಗೃತಿ ಮೂಡಿಸುವ ಸಲುವಾಗಿ ಇಲಾಖೆ ಹಾಗೂ ನಾನಾ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಮ್ಯಾರಾಥಾನ ಸ್ಪರ್ಧೆ ಆಯೋಜಿಸಲಾಗಿದೆ.
>
> **– ಡಾ. ಅರುಂಧತಿ ಕುಲಕರ್ಣಿ**
> **ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳು.**

ಡಾ. ಅರುಂಧತಿ ಕುಲಕರ್ಣಿ ಮಾತನಾಡಿ, ಹೆಚ್.ಐ.ವಿ. ಸೋಂಕಿನ ಪ್ರಮಾಣ ಇಳಿಮುಖವಾಗಿದ್ದು, ಜಿಲ್ಲೆಯ ಯುವ ಸಮುದಾಯ ಜಾಗೃತಿಯನ್ನು ಮೂಡಿಸಿ ಜಿಲ್ಲೆಯಲ್ಲಿ ಸೋಂಕಿನ ಪ್ರಮಾಣವನ್ನು ಸೊನ್ನೆಗೆ ತರಲು ಶ್ರಮಿಸಬೇಕೆಂದು ತಿಳಿಸಿದರು. ಮ್ಯಾರಥಾನ್ ನಡೆಸುವ ಉದ್ದೇಶ ಏಡ್ಸ್ ಬಗ್ಗೆ ಅರಿವು, ಸೇವಾ ಸೌಲಭ್ಯಗಳ ಮಾಹಿತಿ, ಕಳಂಕ ಮತ್ತು ತಾರತಮ್ಯವನ್ನು ತಡೆಗಟ್ಟುವುದು, ನ್ಯಾಕೋ ಏಡ್ಸ್ ಆ್ಯಪ್, ಉಚಿತ ಸಹಾಯವಾಣಿ 1097, ಎಸ್,ಟಿ.ಐ. ಖಾಯಿಲೆಗಳು ಇತಾದಿ ವಿಷಯಗಳ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವುದು ಈ ಸ್ಪರ್ಧೆಯ ಉದ್ದೇಶ ಎಂದು ಹೇಳಿದರು.

> ಸ್ಪರ್ಧೆಯಲ್ಲಿ ಪುರುಷರಲ್ಲಿ ಪ್ರಥಮ ಸ್ಥಾನ-ಈರಪ್ಪ ಲಕ್ಕುಂಡಿ, ದ್ವಿತೀಯ-ನಿಂಗಪ್ಪ ಕರಿಗಣ್ಣವರ, ತೃತೀಯ- ಸುದೀಪ ಖಾನಾಪೂರ ಪಡೆದುಕೊಂದಿದ್ದು, ಪರಶುರಾಮ ಹಿರೇಮನಿ, ವಿಜಯ ಬಿಸ್ನಳ್ಳಿ, ವಿಜಯಕುಮಾರ ಹಡಗಳಿ, ಮುತ್ತಪ್ಪ ನಾಯ್ಕರ ಈ ನಾಲ್ವರು ಸಮಾಧಾನಕರ ಪ್ರಶಸ್ತಿಗೆ ಭಾಜನರಾದರು. ವಿದ್ಯಾರ್ಥಿನಿಯರ ವಿಭಾಗದಲ್ಲಿ, ಪ್ರಥಮ-ಭೂಮಿಕಾ ಮಠಾಣಿ, ದ್ವಿತೀಯ-ಜ್ಯೋತಿ ಕಾಕುರಗೋಡ, ತೃತೀಯ-ಶೋಭಾ ತಂಬೂರಿ ಪಡೆದುಕೊಂಡಿದ್ದು, ಕನಕಾ ಎಸ್.ಜಿ., ವಿಜಯಲಕ್ಷ್ಮಿ ನಲವಡಿ, ಪೂಜಾ ಪೋತದಾರ, ಶಿಲ್ಪಾ ಕೊಂತಿಕಲ್ ಈ ನಾಲ್ವರು ಸಮಾಧಾನಕರ ಪ್ರಶಸ್ತಿಗೆ ಭಾಜನರಾದರು. ಗದಗ ಐ.ಎಮ್.ಎ. ಹಾಗೂ ನೂರಾನಿ ಟ್ರಸ್ಟ್‌ನಿಂದ ಮ್ಯಾರಥಾನ್‌ಗೆ 100 ಟಿ-ಶರ್ಟಗಳನ್ನು ಕೊಡುಗೆಯಾಗಿ ನೀಡಿದ್ದು ಮೆರಗು ತಂದಿತು.

ಮ್ಯಾರಥಾನ್ ಜನಜಾಗೃತಿ ಕಾರ್ಯಕ್ರಮದಲ್ಲಿ ಐ.ಎಮ್.ಎ. ಗದಗ ಅಧ್ಯಕ್ಷರಾದ ಡಾ. ಜಿ.ಎಸ್. ಪಲ್ಲೇದ, ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯ ಡಾ. ಆರ್.ಎನ್. ಗೋಡಬೋಲೆ, ರೋಟರಿ ಸೆಂಟ್ರಲ್ ಗದಗ ಅಧ್ಯಕ್ಷರಾದ ದಾನಪ್ಪಗೌಡರ, ಲಾಯನ್ಸ್ ಕ್ಲಬ್ ಅಧ್ಯಕ್ಷರಾದ ನಿತೀಶ ಸಾಲಿ, ನೂರಾನಿ ಟ್ರಸ್ಟ್ ಪದಾಧಿಕಾರಿ ನುಮೇರ ನೂರಾನಿ, ಜಿಲ್ಲಾ ಎನ್.ಎಸ್.ಎಸ್. ನೋಡಲ್ ಅಧಿಕಾರಿ ಪ್ರೊ. ಎಸ್.ಎಸ್. ಕೊಳ್ಳಿಯವರ, ಕ್ರೀಡಾ ಇಲಾಖೆ ತರಬೇತಿದಾರರಾದ ಮಂಜುನಾಥ ಬಾಗಡೆ, ವಿದ್ಯಾ ಕುಲಕರ್ಣಿ, ಗದಗ ತಾಲೂಕಿನ ದೈಹಿಕ ಶಿಕ್ಷಕರ ಸಂಘದ ಪದಾಧಿಕಾರಿಗಳು ಹಾಗೂ ದೈಹಿಕ ಶಿಕ್ಷಕರು, ಜಿಲ್ಲೆಯ ರೆಡ್‌ರಿಬ್ಬನ್ ಹಾಗೂ ಎನ್.ಎಸ್.ಎಸ್. ಅಧಿಕಾರಿಗಳು, ಆರೋಗ್ಯ ಇಲಾಖೆಯ ರೂಪಸೇನ್ ಚೌವ್ಹಾಣ, ಗೀತಾ ಕಾಂಬಳೆ, ಪುಷ್ಪಾ ಪಾಟೀಲ, ಸಿದ್ದಪ್ಪ ಲಿಂಗದಾಳ, ಬಸವರಾಜ ಹಿರೇಹಾಳ, ಗುರುರಾಜ ಕೋಟ್ಯಾಳ, ಜಿಲ್ಲೆಯ ಎಲ್ಲ ಐಸಿಟಿಸಿ, ಎ.ಆರ್.ಟಿ. ಡ್ಯಾಪ್ಕೊ ಸಿಬ್ಬಂದಿ, ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗ ಹಾಗೂ ಶಿಕ್ಷಣ ಇಲಾಖೆಯ ಸಿಬ್ಬಂದಿ, ರಕ್ಷಣೆ ಸಂಸ್ಥೆಯ ಹಜರತ್‌ಬಿ ಮತ್ತು ಸಿಬ್ಬಂದಿ, ಸೃಷ್ಟಿ ಸಂಸ್ಥೆಯ ಆದಿತ್ಯಾ ಮತ್ತು ಸಿಬ್ಬಂದಿ, ಚೈತನ್ಯ ಸಂಸ್ಥೆಯ ಸುನೀಲ್ ಮತ್ತು ಸಿಬ್ಬಂದಿ, ನವಚೇತನ ಸಂಸ್ಥೆಯ ಅಸ್ಲಂ ಮುಂತಾದವರು ಹಾಜರಿದ್ದರು.

ಪ್ರಾರಂಭದಲ್ಲಿ ಐ.ಸಿ.ಟಿ.ಸಿ. ಸಿಬ್ಬಂದಿ ಸ್ವಾಗತಿಸಿದರು. ಬಸವರಾಜ ಲಾಳಗಟ್ಟಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ವಸಂತ ನಾಡಿಗೇರ ನಿಧನಕ್ಕೆ ಸತೀಶ ಹೂಲಿ ಸಂತಾಪ

■ವಿಜಯಸಾಕ್ಷಿ ಸುದ್ದಿ, ಗದಗ

ಹಿರಿಯ ಪತ್ರಕರ್ತ ವಸಂತ ನಾಡಿಗೇರ ಅವರು ಸ್ವರ್ಗಸ್ಥರಾದ ವಿಷಯ ತಿಳಿದು ಅತೀವ ದುಃಖವಾಗಿದೆ ಎಂದು ಚಿಂತಕ ಸತೀಶ ಹೂಲಿ ಸಂತಾಪ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ನಾಲ್ಕು ದಶಕಕ್ಕೂ ಹೆಚ್ಚು ಕಾಲ ಕನ್ನಡ ಪತ್ರಿಕೋದ್ಯಮದಲ್ಲಿ ವಸಂತ ನಾಡಿಗೇರ ಅವರು ಕೆಲಸ ನಿರ್ವಹಿಸಿದ್ದು, ಅವರು ಎಲ್ಲರಿಗೂ ಚಿರಪರಿಚಿತರಾಗಿದ್ದರು. ವಿಶಿಷ್ಟವಾದ ಪೆನ್ ಹೆಡ್ಡಿಂಗ್ ಮೂಲಕ ಹೆಡಲೈನ್ ಮಾಸ್ತರ್ ಎಂದೇ ಪ್ರಖ್ಯಾತರಾಗಿ ಸರಳ, ಸಜ್ಜನಿಕೆಯ ವ್ಯಕ್ತಿಯಾಗಿದ್ದರು. ಇವರ ಅಗಲಿಕೆಯಿಂದ ರಾಜ್ಯದ ಪ್ರತಿಕಾ ರಂಗವು ಒಬ್ಬ ಹಿರಿಯ ಹಾಗೂ ಅನುಭವಿ ಪತ್ರಕರ್ತನನ್ನು ಕಳೆದುಕೊಂಡಂತಾಗಿದೆ.

ಅವರ ಕುಟುಂಬ ವರ್ಗದವರಿಗೆ ಈ ದುಃಖವನ್ನು ಭರಿಸುವ ಶಕ್ತಿ ನೀಡಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದು ತಿಳಿಸಿದ್ದಾರೆ.

## ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ



■ವಿಜಯಸಾಕ್ಷಿ ಸುದ್ದಿ, ಗದಗ

ನಾಗಾವಿ ಕ್ರಾಸ್, ಹರ್ತಿಯಿಂದ ಮುಳಗುಂದ ಪಟ್ಟಣದವರೆಗಿನ ರಸ್ತೆಯ ಕಾಮಗಾರಿ ಉತ್ತಮ ಗುಣಮಟ್ಟದಿಂದ ಕೂಡಿರಲಿ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.


ಹರ್ತಿ ಗ್ರಾಮದಲ್ಲಿ ರವಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಲೋಕೋಪಯೋಗಿ ಇಲಾಖೆ ಸಹಯೋಗದಲ್ಲಿ ಲೆಕ್ಕ ಶೀರ್ಷಿಕೆ ಎಸ್.ಹೆಚ್.ಡಿ.ಪಿ.-2023-24ನೇ ಸಾಲಿನ ಅಂದಾಜು 25 ಕೋಟಿ ರೂ.ಗಳ ಅನುದಾನದಲ್ಲಿ ನಿರ್ಮಿಸುವ ರಸ್ತೆ ಕಾಮಗಾರಿಯ ಭೂಮಿಪೂಜೆಯನ್ನು ನೆರವೇರಿಸಿ ಸಚಿವರು ಮಾತನಾಡಿದರು.

ಉತ್ತಮ ರಸ್ತೆಯಿಂದ ಗ್ರಾಮಗಳು ಅಭಿವೃದ್ಧಿ ಹೊಂದುತ್ತವೆ. ವ್ಯಾಪಾರ-ವಹಿವಾಟು ಹೆಚ್ಚಾಗುತ್ತದೆ. ಹಾಗಾಗಿ ನಾಗಾವಿ ಕ್ರಾಸ್‌ನಿಂದ ಮುಳಗುಂದ ಪಟ್ಟಣದವರೆಗೆ ನಿರ್ಮಾಣವಾಗುವ ರಸ್ತೆ ಉತ್ತಮ ಗುಣಮಟ್ಟದಿಂದ ಇರಬೇಕು ಮತ್ತು ನಿಗದಿತ ಸಮಯದೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಅಶೋಕ ಮಂದಾಲಿ, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ರಮೇಶ ಪಾಟೀಲ, ಕೆ.ವಿ. ಹಂಚಿನಾಳ ಸೇರಿದಂತೆ ಗ್ರಾಮದ ಗಣ್ಯರು ಹಾಜರಿದ್ದರು.

## ಸಭಾಪತಿ ಬಸವರಾಜ್ ಹೊರಟ್ಟಿ ಪ್ರವಾಸ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿಯವರು ಸೆಪ್ಟೆಂಬರ್ 11 ರಂದು ಬೆಳಿಗ್ಗೆ 10 ಗಂಟೆಗೆ ಹುಬ್ಬಳ್ಳಿಯಿಂದ ಗದಗ ಜಿಲ್ಲೆಗೆ ರಸ್ತೆ ಮೂಲಕ ಆಗಮಿಸುವರು. ಬೆ. 11 ಗಂಟೆಗೆ ನಾಗಾವಿಯಲ್ಲಿನ ಗ್ರಾಮ ಗಂಗೋತ್ರಿ ವಿಶ್ವವಿದ್ಯಾಲಯದ ಆವರಣದಲ್ಲಿ ಸ್ವಾಮಿ ವಿವೇಕಾನಂದರ ಪ್ರತಿಮೆ ಅನಾವರಣ ಸಮಾರಂಭದಲ್ಲಿ ಭಾಗಹಿಸುವರು. ಮಧ್ಯಾಹ್ನ 12 ಗಂಟೆಗೆ ಗದಗ ಜಿಲ್ಲೆಯಿಂದ ಹುಬ್ಬಳ್ಳಿಗೆ ರಸ್ತೆ ಮೂಲಕ ಪ್ರಯಾಣಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯಂದು ಪರಿಶಿಷ್ಟ ವರ್ಗದ ಜನಾಂಗದ ಏಳಿಗೆಗಾಗಿ ಶ್ರಮಿಸಿದ ವ್ಯಕ್ತಿಗಳಿಗೆ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ನೀಡಿ ಗೌರವಿಸಲು ಸರ್ಕಾರ ನಿರ್ಧರಿಸಿದೆ. ಅಕ್ಟೋಬರ್ 17 ರಂದು ನಡೆಯುವ ಮಹರ್ಷಿ ವಾಲ್ಮೀಕಿ ಜಯಂತಿಯಂದು ಪ್ರಶಸ್ತಿಯನ್ನು ನೀಡಲು ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿ ಪ್ರಶಸ್ತಿಗೆ ಅರ್ಹ ವ್ಯಕ್ತಿಗಳನ್ನು ಆಯ್ಕೆ ಮಾಡಬೇಕಾಗಿದ್ದರಿಂದ ಸಮಾಜ ಸೇವೆ ಕೈಗೊಂಡ ಹಾಗೂ ಪರಿಶಿಷ್ಟ ಪಂಗಡದ ಜನಾಂಗದ ಏಳಿಗೆಗಾಗಿ ಶ್ರಮಿಸಿದ ಬಗ್ಗೆ ಛಾಯಾಚಿತ್ರ ಹಾಗೂ ದಾಖಲೆ ಸಮೇತವಾಗಿ ಅರ್ಜಿಯನ್ನು

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರ ಕಚೇರಿ , ರೂ.ನಂ: 107. ಮೊದಲನೇ ಮಹಡಿ. ಜಿಲ್ಲಾಡಳಿತ ಭವನ. ಹುಬ್ಬಳ್ಳಿ ರೋಡ್ ಈ ಕಛೇರಿಯಗೆ ಸಪ್ಟೆಂಬರ್ 17 ರೊಳಗಾಗಿ ಖುದ್ದಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಖಿದ್ಮತ್-ಎ-ಮಿಲ್ಲತ್ ಗ್ರೂಪ್ ವತಿಯಿಂದ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಮುಳಗುಂದ



ಇಲ್ಲಿನ ಪಟ್ಟಣ ಪಂಚಾಯಿತಿಗೆ ನೂತನ ಅಧ್ಯಕ್ಷರಾಗಿ ಯಲ್ಲವ್ವ ಕವಲೂರ, ಉಪಾಧ್ಯಕ್ಷರಾಗಿ ಅನಸೂಯಾ ಸೋಮಗಿರಿ ಹಾಗೂ ಪ.ಪಂ ಆಶ್ರಯ ಕಮಿಟಿಗೆ ನಾಮನಿರ್ದೇಶಿತ ಸದಸ್ಯರಾಗಿ ಆಯ್ಕೆಯಾದ ಬಿ.ವ್ಹಿ. ಸುಂಕಾಪೂರ, ಫಕೀರಯ್ಯ ಅಮೋಘೀಮಠ ಹಾಗೂ ಮುಮತಾಜ್ ಸೈಯದಲಿ ಶೇಖ ಅವರಿಗೆ ಸ್ಥಳೀಯ ಖಿದ್ಮತ್-ಎ-ಮಿಲ್ಲತ್ ಗ್ರೂಪ್ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಗ್ರೂಪ್‌ನ ಅಧ್ಯಕ್ಷರಾದ ರಾಜೇಸಾಬ ಸೈಯದಬಡೆ, ಅಂಜುಮನ ಸಂಸ್ಥೆ ಅಧ್ಯಕ್ಷರಾದ ತಾಜುದ್ದೀನ ಕಿಂಡ್ರಿ, ಚಾಂದ ಮುಬಾರಕ, ಕಮಿಟಿ ಅಧ್ಯಕ್ಷ ಎಂ.ಎ. ಖಾಜಿ, ಉಪಾಧ್ಯಕ್ಷ ಅಬ್ದುಲಹಮೀದ ಮುಜಾವರ, ಕಾರ್ಯದರ್ಶಿ ಹೈದರ ಖವಾಸ, ಖಜಾಂಚಿ ಮುನ್ನಾ ಢಾಲಾಯತ, ಮಹ್ಮದರಫೀಕ ದಲೀಲ, ದಾವಲಸಾಬ ಲಕ್ಷ್ಮೇಶ್ವರ ಹಾಗೂ ಗ್ರೂಪ್ ಸದಸ್ಯರಾದ ದಾವೂದ ಜಮಾಲ, ಖಲಂದರ ಗಾಡಿ, ನಜೀರ ಢಾಲಾಯತ ಹಿರಿಯರಾದ ಮಲ್ಲಪ್ಪ ಕುಂದಗೋಳ, ವರ್ಷಾ ಬಾರಕೇರ ಇತರರು ಹಾಜರಿದ್ದರು.

## ಹಿರಿಯ ಗ್ರಂಥಪಾಲಕ ಹನಮಂತಪ್ಪ ಬಾರಕೇರ ನಿಧನಕ್ಕೆ ಸಂತಾಪ



ಗದಗ: ನಗರದ ಹಿರಿಯ ಗ್ರಂಥಪಾಲಕರು ಹಾಗೂ ಗಂಗಾಮತ ಸಮಾಜದ ಹಿರಿಯರಾದ ಹನಮಂತಪ್ಪ ರಾಮಪ್ಪ ಬಾರಕೇರ ಅವರ ನಿಧನಕ್ಕೆ ಗಂಗಾಮತ ಸಮಾಜದ ಪ್ರಧಾನ ಕಾರ್ಯದರ್ಶಿ ಸಂಗಮೇಶ ಹಾದಿಮನಿ ಸಂತಾಪ ವ್ಯಕ್ತಪಡಿಸಿದ್ದಾರೆ.

ಸಾಮಾಜಿಕ ಸೇವೆಯಲ್ಲಿ ತಮ್ಮನ್ನ ತಾವು ತೊಡಗಿಸಿಕೊಂಡು ಅಪಾರ ಸೇವೆ ಮಾಡಿದ್ದು, ಅನೇಕ ಧಾರ್ಮಿಕ ಕೇಂದ್ರಗಳಲ್ಲಿ ಸೇವೆ ಮಾಡುತ್ತ ಸರಳ ಜೀವನ ಸಾಗಿಸಿದ ಗಂಗಾಮತ ಸಮಾಜಕ್ಕೆ ತುಂಬಲಾರದ ನಷ್ಟವಾಗಿದೆ. ಹನಮಂತಪ್ಪ ಬಾರಕೇರ ಅವರ ವಿಚಾರಗಳು ಹಾಗೂ ಆದರ್ಶಗಳು ಅವಿಸ್ಮರಣಿಯವಾಗಿದ್ದು, ಅವರ ಅಗಲಿಕೆ ಅಪಾರ ನೋವು ತಂದಿದೆ ಎಂದು ಸಂಗಮೇಶ ಹಾದಿಮನಿ ತಿಳಿಸಿದ್ದಾರೆ.

## ಕಟ್ಟಡ ಮಾಲೀಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಗದಗ ಪಟ್ಟಣಕ್ಕೆ ಹೊಸದಾಗಿ ಮಂಜೂರಾಗಿರುವ ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕಿಯರ ವಸತಿ ನಿಲಯಕ್ಕೆ ಗದಗ ನಗರಸಭೆ ವ್ಯಾಪ್ತಿಯಲ್ಲಿ 100 ವಿದ್ಯಾರ್ಥಿಗಳ ವಸತಿ ಸಾಮರ್ಥ್ಯ ಹೊಂದಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒಳಗೊಂಡಿರುವ ಬಾಡಿಗೆ ಕಟ್ಟಡ ಅವಶ್ಯವಿದ್ದು, ಕಟ್ಟಡವನ್ನು ಬಾಡಿಗೆ ನೀಡುವ ಮಾಲೀಕರು ತುರ್ತಾಗಿ ತಾಲೂಕ ವಿಸ್ತರಣಾಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಉಪವಿಭಾಗ ಅವರನ್ನು ಸೆಪ್ಟೆಂಬರ್ 16 ರೊಳಗಾಗಿ ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ 9741921025 ಗೆ ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ. ಕಟ್ಟಡ ಮಾಲೀಕರ ಗಮನಕ್ಕೆ.

## ಇಂದು ರಾಜ್ಯ ಚುನಾವಣಾ ಆಯುಕ್ತರ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಚುನಾವಣಾ ಆಯೋಗದ ಆಯುಕ್ತರಾದ ಜಿ.ಎಸ್.ಸಂಗ್ರೇಶಿ ಅವರು ಸೆಪ್ಟೆಂಬರ್ 11 ರಂದು ಬೆಳಿಗ್ಗೆ 9 ಗಂಟೆಗೆ ಧಾರವಾಡದಿಂದ ಗದಗ ಜಿಲ್ಲೆಗೆ ಆಗಮಿಸಿ ಜಿಲ್ಲಾಧಿಕಾರಿಗಳೊಂದಿಗೆ ಭೇಟಿ ಮಾಡಿ ಚುನಾವಣಾ ವಿಷಯದ ಬಗ್ಗೆ ಚರ್ಚೆ ಮಾಡಲಿದ್ದಾರೆ. ನಂತರ ಧಾರವಾಡಕ್ಕೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.


ಕರ್ನಾಟಕ ಸರ್ಕಾರ

**ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಕಾರ್ಯಾಲಯ, ಗದಗ ಉಪ ವಿಭಾಗ, ಗದಗ ಬಿಂಕದಕಟ್ಟಿ-582103**

**ಮೊಬೈಲ್ ನಂ : 94819 92603 ಇ-ಮೇಲ್ : acfgadag@gmail.com**

ಕ್ರ.ಸಂ: ಎ2/ಬಿಜಿಟಿ/ಹೊ.ಗು/ಸಿಆರ್-17/2024-25 ದಿನಾಂಕ : 09-09-2024

**ಅಲ್ಪಾವಧಿ ಇ-ಟೆಂಡರ ಪ್ರಕಟಣೆ**

ಗದಗ ವಿಭಾಗದಲ್ಲಿರುವ ವಿಭಾಗ, ಉಪ ವಿಭಾಗ ಮತ್ತು ವಲಯ ಕಚೇರಿಗಳಲ್ಲಿ 2024-25 ನೇ ಸಾಲಿನಲ್ಲಿ ವಿವಿಧ ಯೋಜನೆ & ಲೆಕ್ಕ ಶೀರ್ಷಿಕೆಯಡಿ ಅರಣ್ಯ ರಕ್ಷಣಾ ಶಿಬಿರಗಳಿಗೆ ಕಾವಲುಗಾರ ಹಾಗೂ 'ಡಿ' ಗ್ರೂಪ್ ನೌಕರರನ್ನು ಹೊರಗುತ್ತಿಗೆ ಆಧಾರದ ಮೇಲೆ ಮಾನವ ಸಂಪನ್ಮೂಲ ಸೇವೆ ಪೂರೈಕೆ ಕುರಿತು ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಇ-ಪೋರ್ಟಲ್ ನೋಂದಾಯಿತ ಗುತ್ತಿಗೆದಾರರಿಂದ ಪಾರದರ್ಶಕತೆ ನಿಯಮ ಹಾಗೂ ಅಧಿನಿಯಮಗಳನ್ವಯ ದಿನಾಂಕ : **01-09-2024** ರಿಂದ **31-03-2025** ರ ಅವಧಿಯವರೆಗೆ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್-2.0 ಆವೃತ್ತಿ ಮೂಲಕ ಇ-ಟೆಂಡರ್‌ನ್ನು **https://kppp.karnataka.gov.in** ನಲ್ಲಿ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್ ವೇಳಾಪಟ್ಟಿ ಈ ಕೆಳಗಿನಂತಿರುತ್ತದೆ..

ವಿವರ : (1) ಇ-ಟೆಂಡರ್ ಪ್ರಕಟಣೆ ದಿನಾಂಕ : **09-09-2024**. (2) ಇ-ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ : (ತಾಂತ್ರಿಕ) **24-09-2024** ಅಪರಾಹ್ನ 4.00 ಗಂಟೆವರೆಗೆ. (3) ತಾಂತ್ರಿಕ ಬಿಡ್ ತೆರೆಯುವ ದಿನಾಂಕ ಸಮಯ **26-09-2024** ಬೆಳಿಗ್ಗೆ 11.00 ಗಂಟೆವರೆಗೆ. (4) ಟೆಂಡರ್ ಪರಿಶೀಲನೆ ದಿನಾಂಕ : **27-09-2024**. (5) ಆರ್ಥಿಕ ಬಿಡ್ ತೆರೆಯುವ ದಿನಾಂಕ ಸಮಯ **30-09-2024** ಬೆಳಿಗ್ಗೆ 11.00 ಗಂಟೆಗೆ. (6) ಅಂದಾಜು ಮೊತ್ತ ರೂ. **40.32** ಲಕ್ಷ (7) ಇಎಂಡಿ ಠೇವಣಿ ಮೊತ್ತ ರೂ. **1.008** ಲಕ್ಷ.

ಮೇಲಿನ ದಿನಾಂಕಗಳಂದು ಸಾರ್ವತ್ರಿಕೆ ರಜೆಯಿದ್ದಲ್ಲಿ/ ಸಾರ್ವತ್ರಿಕ ರಜೆಯೆಂದು ಘೋಷಣೆಯಾದಲ್ಲಿ ಮುಂದಿನ ದಿನಾಂಕಗಳನ್ನು ಪರಿಗಣಿಸುವುದು.ಟೆಂಡರ್‌ಗೆ ಸಂಬಂಧಿಸಿದಂತೆ ಷರತ್ತು ಹಾಗೂ ಹೆಚ್ಚಿನ ಮಾಹಿತಿ, ವಿವರಗಳನ್ನು

ಕರ್ನಾಟಕ ಸರ್ಕಾರದ **https://kppp.karnataka.gov.in** ಇ-ಪೋರ್ಟಲ್ ಮೂಲಕ ಪಡೆದುಕೊಳ್ಳತಕ್ಕದ್ದು. ಒಂದು ವೇಳೆ ಸದರಿ ದಿನದಂದು ಯಾವುದೇ ಬಿಡ್‌ದಾರರು ಭಾಗವಹಿಸದೇ ಇದ್ದಲ್ಲಿ /ಸಿಂಗಲ್ ಬಿಡ್ ಆದಲ್ಲಿ ಮರು ಟೆಂಡರ್ ಆಹ್ವಾನಿಸಲಾಗುವುದು. ಮರು ಟೆಂಡರ್‌ಗೆ ಪ್ರತ್ಯೇಕ ನೋಟಿಫಿಕೇಷನ್ ಹೊರಡಿಸಲಾಗುವುದಿಲ್ಲ.

ಸಹಿ/- ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು, ಗದಗ ಉಪ ವಿಭಾಗ, ಗದಗ.

ವಾಸಾಸಂಇ/ಗದಗ/ಕೆಎಸ್‌ಎಂಸಿಎ/209/2024-25



**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.

ಇ ಮೇಲ್: uda-gadag@hotmail.com

**ಪ್ರಕಟಣೆ**

ಸಂ: ನಅಪ್ರಾಗಬೆ/ಭೂಬ/2024-25/ 688 ದಿನಾಂಕ: 09-09-2024.

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ ಶ್ರೀ ಜಹೀರುದ್ದಿನ ತಂದೆ ಬಾಬುಸಾಬ ತಾಡಪತ್ರಿ ಇವರು ಸಾ॥ ಗದಗ ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14(ಎ) ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1 | ಬೆಟಗೇರಿ | 387/*/4 | 00ಎಕರೆ-21ಗುಂಟೆ ಪೈಕಿ 07ಗುಂ-08ಆಣೆ | ಕೃಷಿ ವಲಯ | ವಸತಿ |
| | | 387/*/5 | 00ಎಕರೆ-21ಗುಂಟೆ | | |
| | | 387/*/6 | 00ಎಕರೆ-21ಗುಂಟೆ ಪೈಕಿ 00ಎ-16ಗುಂಟೆ | | |
| | | 387/*/7 | 00ಎಕರೆ-21ಗುಂಟೆ | | |
| | | | ಒಟ್ಟು ಕ್ಷೇತ್ರ: 02ಎಕರೆ-04ಗುಂಟೆ ಪೈಕಿ 01ಎಕರೆ-25ಗುಂಟೆ-08ಆಣೆ | | |

ವಾ.ಸಾ.ಇ/ಗದಗ/205/ದೇಶಪಾಂಡೆಪಬ್ಲಿಸಿಟಿ/2024-25

ಸಹಿ/- ಆಯುಕ್ತರು ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka